ಸಂಪುಟ : 10 ಸಂಚಿಕೆ: 237 ಪುಟ : 4+2 ಬೆಲೆ: 3.00 ಶನಿವಾರ ನವೆಂಬರ್ 01 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 237 Pages : 4+2 Price : 3.00 Saturday November 01 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಸಚಿವ ಎಚ್.ಕೆ. ಪಾಟೀಲ ಅಧ್ಯಕ್ಷತೆಯಲ್ಲಿ ಜಿಲ್ಲಾ ಯೋಜನಾ ಸಮಿತಿ ಸಭೆ

## ಜನರ ಬೇಡಿಕೆಗನುಸಾರ ಅಭಿವೃದ್ಧಿ ಯೋಜನೆಗಳನ್ನು ತಯಾರಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಜನರ ಬೇಡಿಕೆಗನುಸಾರವಾಗಿ ಯೋಜನೆಗಳನ್ನು ತಯಾರಿಸಬೇಕು. ಈ ಯೋಜನೆಗಳು ಗ್ರಾಮ ಮಟ್ಟದಿಂದ ರಾಜ್ಯದ ಯೋಜನೆಗಳಿಗೆ ಸೇರಬೇಕು. ಈ ನಿಟ್ಟಿನಲ್ಲಿ ಜಿಲ್ಲಾ ಯೋಜನಾ ಸಮಿತಿಯು ಅತ್ಯಂತ ಮಹತ್ವದ ಸಮಿತಿಯಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಸಚಿವರು, ಜಿಲ್ಲಾ ಯೋಜನಾ ಸಮಿತಿಯ ಅಧ್ಯಕ್ಷರೂ ಆಗಿರುವ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ಜರುಗಿದ ಜಿಲ್ಲಾ ಯೋಜನಾ ಸಮಿತಿ ಸಭೆಯ ಅಧಕ್ಷತೆ ವಹಿಸಿ ಸಚಿವರು ಮಾತನಾಡಿದರು.

ಜಿಲ್ಲಾ ಯೋಜನಾ ಸಮಿತಿ ಸದಸ್ಯರುಗಳಿಗೆ ಅಭಿನಂದನೆ ಸಲ್ಲಿಸಿ ಮಾತನಾಡಿದ ಸಚಿವರು, ಜಿಲ್ಲೆಯ ಗ್ರಾಮಗಳಲ್ಲಿಯ ವರದಿಗಳನ್ನು ಆಧರಿಸಿದ ಯೋಜನೆಗಳು ಮೇಲ್ಮಟ್ಟದವರೆಗೆ ಸಿದ್ಧಪಡಿಸಿದ ಯೋಜನೆಗಳ ವರದಿಯು ರಾಜ್ಯಕ್ಕೆ ಮುನ್ನುಡಿಯಾಗಬೇಕು. ಗ್ರಾಮ ಸಭೆಗಳಲ್ಲಿ, ವಾರ್ಡ್ ಸಭೆಗಳಲ್ಲಿ ಚರ್ಚಿಸಿರುವ ವಿಷಯಗಳನ್ನು ಸಮಿತಿಯ ಗಮನಕ್ಕೆ ತರಬೇಕು. ಕೆಳಮಟ್ಟದಿಂದ ಯೋಜನೆಗಳ ತಯಾರಿಕೆ, ಕಾಮಗಾರಿಗಳ ಅನುಷ್ಠಾನಕ್ಕೆ ಕ್ರಮ ವಹಿಸಬೇಕು. ಕೆಳಮಟ್ಟದಿಂದ ಮೇಲ್ಮಟ್ಟದವರೆಗೆ ಯೋಜನೆ ಸಿದ್ಧಪಡಿಸಲು ಪ್ರಯೋಗ ಪ್ರಾರಂಭಿಸಿದ್ದು ಗದಗ ಜಿಲ್ಲೆಯಾಗಿದೆ ಎಂದು ಹೆಮ್ಮೆ ವ್ಯಕ್ತಪಡಿಸಿದರು.

ಜಿ.ಪಂ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ ಮಾನವ ಅಭಿವೃದ್ಧಿ ಸೂಚ್ಯಂಕ ಮತ್ತು ಸಮಗ್ರ ಅಭಿವೃದ್ಧಿ ಸೂಚ್ಯಂಕಗಳ ವಿವರಗಳನ್ನು ಮಂಡಿಸಿದರು. ಕೆಲವು ಪರಿಷ್ಕರಣೆಯೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಸರ್ವಾನುಮತದಿಂದ ಸಭೆಯಲ್ಲಿ ತೀರ್ಮಾನಿಸಲಾಯಿತು. ಸರ್ಕಾರಕ್ಕೆ ಕರಡು ಪ್ರಸ್ತಾವನೆಯನ್ನು ನವೆಂಬರ್ 15ರೊಳಗೆ ಸಲ್ಲಿಸಲು ▸▸ 3ನೇ ಪುಟಕ್ಕೆ

> ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಎಷ್ಟು ಶಾಲಾ ಶೌಚಾಲಯಗಳು ಬೇಕಾಗುತ್ತವೆ ಎಂಬ ವರದಿ ಸಿದ್ಧಪಡಿಸಬೇಕು. ಗಾಂಧೀಜಿಯವರ ಗ್ರಾಮ ಸ್ವರಾಜ್ಯದ ಕನಸು ನನಸಾಗಬೇಕು. ಜಿಲ್ಲಾ ಯೋಜನಾ ಸಮಿತಿಯ ಪಟ್ಟಿ ರಾಜ್ಯಕ್ಕೆ ಮಾದರಿಯಾಗಬೇಕು.
>
> **– ಎಚ್.ಕೆ. ಪಾಟೀಲ.**
> ಜಿಲ್ಲಾ ಉಸ್ತುವಾರಿ ಸಚಿವರು.

ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ ಮಾತನಾಡಿ, ಗ್ರಾ.ಪಂ, ತಾ.ಪಂ ಕ್ರಿಯಾ ಯೋಜನೆಯಲ್ಲಿ ಎಸ್.ಸಿಪಿ/ ಟಿ.ಎಸ್‌ಪಿ ಯೋಜನೆ, ಕಾಮಗಾರಿಗಳ ಸಂಖ್ಯೆ ಹಾಗೂ ಬೇಕಾಗುವ ಅನುದಾನದ ವಿವರಗಳನ್ನು ಪ್ರತ್ಯೇಕವಾಗಿ ನಮೂದಿಸಬೇಕು ಎಂದು ಸಲಹೆ ನೀಡಿದರು.

### ಇಂತಹ ಯಜ್ಞದಲ್ಲಿ ಭಾಗವಹಿಸುತ್ತಿರುವುದು ನಮ್ಮೆಲ್ಲರ ಸೌಭಾಗ್ಯ: ಸಿ.ಸಿ. ಪಾಟೀಲ

## ಸನಾತನ ಧರ್ಮ ಜಾಗೃತಿಯೇ ಕಾರ್ಯಕ್ರಮದ ಉದ್ದೇಶ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ತ್ರಿಕೂಟೇಶ್ವರ ದೇವಸ್ಥಾನದಿಂದ ವಿದ್ಯಾದಾನ ಶಿಕ್ಷಣ ಸಮಿತಿ ಮೈದಾನದವರೆಗೆ ನೂರಾರು ನಾಗಾಸಾಧುಗಳ ನೇತೃತ್ವದಲ್ಲಿ 9 ಅಗ್ನಿಕುಂಡ ಅತಿರುದ್ರ ಮಹಾಯಜ್ಞ, ಕಿರಿಯ ಕುಂಭಮೇಳ ನಡೆಯಲಿದೆ. ನಮ್ಮ ಜೀವಿತಾವಧಿಯಲ್ಲಿ ಇಂತಹ ಯಜ್ಞದಲ್ಲಿ ಭಾಗವಹಿಸುತ್ತಿರುವುದು ನಮ್ಮೆಲ್ಲರ ಸೌಭಾಗ್ಯವಾಗಿದೆ ಎಂದು ಸಮಿತಿಯ ಗೌರವಾಧ್ಯಕ್ಷ ಸಿ.ಸಿ ಪಾಟೀಲ ಹೇಳಿದರು.

ನಗರದ ವಿದ್ಯಾದಾನ ಶಿಕ್ಷಣ ಸಮಿತಿ ಮೈದಾನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಮಹಾಂತ ಸಹದೇವಾನಂದ ಗಿರಿಜೀ ಮಹಾರಾಜರು ನೇತೃತ್ವ ವಹಿಸಿಕೊಳ್ಳಲಿದ್ದು, 5 ಸಾವಿರ ಮಹಿಳೆಯರು ಕುಂಭಮೇಳ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಒಂಬತ್ತು ಅಗ್ನಿಕುಂಡಗಳಲ್ಲಿ ಯಜ್ಞ, ಯಾಗ ನಡೆಯಲಿದೆ. ಹಿಮಾಲಯದಲ್ಲಿ ತಪಸ್ಸು ಮಾಡಿದ ನೂರು ನಾಗಾಸಾಧುಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದರು.

ಮಹಾನ್ ತಪಸ್ವಿ ನಾಗಾಸಾಧುಗಳನ್ನು ನೋಡುವ ಸೌಭಾಗ್ಯ, ಅವರ ತಪಸ್ಸಿನ ಫಲ ಗದಗ ಹಾಗೂ ಸುತ್ತಮುತ್ತಲಿನ ಜನತೆಗೆ ಸಿಗಲಿದೆ. ಉತ್ತರ ಭಾರತದಲ್ಲಿ ಸಿಗುವ ಸಾವಿರ ದವಸಧಾನ್ಯ, ದೇಶ-ವಿದೇಶಗಳ 900 ನದಿಗಳ ನೀರು, 200 ವೈದಿಕರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನವೆಂಬರ್ 18ರಂದು ಬೃಹತ್ ಧರ್ಮಸಭೆ ನಡೆಯಲಿದೆ. ಸಭೆಗೆ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಲಿದ್ದಾರೆ ಎಂದರು.

ಈ ಕಾರ್ಯಕ್ರಮಕ್ಕೆ 3 ಕೋಟಿಗೂ ಅಧಿಕ ಮೊತ್ತ ವೆಚ್ಚವಾಗಲಿದೆ. ಹಲವಾರು ದಾನಿಗಳು ಕಾರ್ಯಕ್ರಮ ಯಶಸ್ವಿಗೆ ಸಹಾಯ-ಸಹಕಾರ ನೀಡಿದ್ದಾರೆ. ಪಕ್ಷಾತೀತವಾಗಿ ಎಲ್ಲ ರಾಜಕಾರಣಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಇದರ ಪ್ರಯೋಜನ ಗದಗ-ಬೆಟಗೇರಿ ನಗರದ ಜನತೆಗಷ್ಟೇ ಅಲ್ಲದೆ ರಾಜ್ಯದ ಜನತೆಗೆ ಆಗಲಿ ಎಂಬುವುದು ನಮ್ಮ ಆಶಯ.

> ನಗರದಲ್ಲಿ ನಡೆಯಲಿರುವ ಈ ಐತಿಹಾಸಿಕ ಕಾರ್ಯಕ್ರಮಕ್ಕೆ ಮೈಸೂರಿನ ರಾಜ ಮನೆತನದ ಅರಸ ಯದುವೀರ ಕೃಷ್ಣದತ್ತ ಒಡೆಯರು ಆಗಮಿಸಲಿದ್ದಾರೆ. ಸಮಿತಿಯಿಂದ ಈಗಾಗಲೇ ಅವರಿಗೆ ಆಮಂತ್ರಣ ನೀಡಿದ್ದು, ಅತೀ ಶೀಘ್ರದಲ್ಲಿ ಭಾಗವಹಿಸುವ ದಿನಾಂಕ ತಿಳಿಸಲಿದ್ದಾರೆ.
>
> **– ಕಿರಣ್ ಭೂಮಾ.**
> ಸಮಿತಿಯ ಅಧ್ಯಕ್ಷರು.

ಪ್ರತಿದಿನ ಬೆಳಿಗ್ಗೆ 6 ಗಂಟೆಯಿಂದ ಸಾಯಂಕಾಲ 7 ಗಂಟೆಯವರೆಗೆ ವಿವಿಧ ಕಾರ್ಯಕ್ರಮಗಳು ನಾಗಾಸಾಧುಗಳ ಹಾಗೂ ಸಂತರ ನೇತೃತ್ವದಲ್ಲಿ ನಡೆಯಲಿದೆ ಎಂದು ಮಾಹಿತಿ ನೀಡಿದರು. ರಾಜಕಾರಣ ಹೊರತುಪಡಿಸಿ ಎಲ್ಲ ಸಮಾಜದ ಜನರು ಭಾಗವಹಿಸಲಿದ್ದಾರೆ. ಪಕ್ಷದ ಚಿನ್ಹೆಯನ್ನು ಹೊರಗಿಟ್ಟು ಈ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದೇವೆ. ಸನಾತನ ಧರ್ಮದ ಜಾಗೃತಿ ಈ ಕಾರ್ಯಕ್ರಮದ ಮೂಲ ಉದ್ದೇಶವಾಗಿದೆ. ಯಜ್ಞ ದರ್ಶನ ಪಡೆಯುವ ದಂಪತಿಗಳು ಶುದ್ಧ ಮಡಿಯಿಂದ ಬರಬೇಕು. ಯಜ್ಞಕುಂಡದಲ್ಲಿ ಮೊದಲ ದಿನ ಭಾಗವಹಿಸುವವರು ಸಾತ್ವಿಕ ಆಹಾರ ಸೇವಿಸಿ ಸತತ ಏಳು ದಿನ ಭಾಗವಹಿಸಬೇಕು ಎಂದರು.

ಈ ಸಂದರ್ಭದಲ್ಲಿ ರವಿ ದಂಡಿನ್, ರಾಜು ಕುರಡಗಿ, ಪ್ರಶಾಂತ್ ನಾಯ್ಕರ್, ರವಿ ಗುಂಜೀಕರ, ಬಸವರಾಜ ಬಿಂಗಿ, ಬಿ.ಬಿ. ಅಸೂಟಿ, ವಿಜಯಲಕ್ಷ್ಮೀ ಮಾನ್ವಿ, ಅಶ್ವಿನಿ ಜಗತಾಪ ಮುಂತಾದವರು ಉಪಸ್ಥಿತರಿದ್ದರು.



## ಕವನ

### ರಾಜ್ಯೋತ್ಸವ



ಕನ್ನಡ ರಾಜ್ಯೋತ್ಸವ ಮಾಡೋಣ
ಬನ್ನಿರಿ ಎಲ್ಲರೂ ಆಚರಿಸೋಣ
ನಮ್ಮೆಲ್ಲರಿಗೂ ಶುಭದಿನ
ಹಾಡುತ ನಲಿಯುತ ಆನಂದಿಸೋಣ

ಎಲ್ಲರೂ ಒಂದೆಡೆ ಕೂಡೋಣ
ಕನ್ನಡ ಧ್ವಜವನು ಹಾರಿಸೋಣ
ಭೇದ-ಭಾವ ಮರೆಯೋಣ
ಒಂದಾಗಿ ಎಲ್ಲರೂ ನಲಿಯೋಣ

ಕನ್ನಡ ಗೀತೆಯನು ಹಾಡೋಣ
ಕನ್ನಡ ವಂದನೆ ಸಲ್ಲಿಸೋಣ
ಎಲ್ಲರೂ ಒಂದಾಗಿ ಬಾಳೋಣ

ತಾಯ್ನಾಡಿಗಾಗಿ ದುಡಿಯೋಣ
ಕನ್ನಡ ರಾಜ್ಯೋತ್ಸವ ಮಾಡೋಣ
ಬನ್ನಿರಿ ಎಲ್ಲರೂ ಆಚರಿಸೋಣ.

**– ವಿ.ಎಂ.ಎಸ್. ಗೋಪಿ.**
ಲೇಖಕರು, ಬೆಂಗಳೂರು.

**ಜಿಲ್ಲೆಯಲ್ಲಿ ನ.3ರಿಂದ ಡಿ. 2ರವರೆಗೆ ರಾಷ್ಟ್ರೀಯ ಕಾಲು ಬಾಯಿ ರೋಗ ನಿಯಂತ್ರಣ ಲಸಿಕೆ ಅಭಿಯಾನ**

# 2030ರ ಒಳಗೆ ರೋಗ ನಿರ್ಮೂಲನೆಯ ಗುರಿ

**■ ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕಾಲು ಬಾಯಿ ರೋಗ ನಿಯಂತ್ರಣ ಲಸಿಕೆ ಅಭಿಯಾನವನ್ನು ಜಿಲ್ಲೆಯಾದ್ಯಂತ ನವೆಂಬರ್ 3ರಿಂದ ಡಿಸೆಂಬರ್ 2ರವರೆಗೆ ಹಮ್ಮಿಕೊಳ್ಳಲಾಗಿದೆ. ಈ ಕುರಿತು ಶುಕ್ರವಾರ ಜರುಗಿದ ಜಿಲ್ಲಾ ಮೇಲುಸ್ತುವಾರಿ ಸಮಿತಿ ಸಭೆಯಲ್ಲಿ ಸಮಿತಿಯ ಅಧ್ಯಕ್ಷರಾದ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಾತನಾಡಿ, ರೈತರು, ಪಶುಪಾಲನೆ ಮಾಡುವವರು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯೊಂದಿಗೆ ಸಹಕರಿಸಿ ತಮ್ಮಲ್ಲಿರುವ ಎಲ್ಲ ಜಾನುವಾರುಗಳಿಗೆ ಲಸಿಕೆ ಹಾಕಿಸಿಕೊಳ್ಳಲು ಗ್ರಾಮ ಮಟ್ಟದಲ್ಲಿ ಅಧಿಕಾರಿಗಳು ಮಾಹಿತಿ ನೀಡಿ, ಜಾಗೃತಿ ಮೂಡಿಸಲು ತಿಳಿಸಿದರು.

ಕೇಂದ್ರ ಪುರಸ್ಕೃತ ಯೋಜನೆ, ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮ ಅಡಿಯಲ್ಲಿ ಪ್ರತಿ ಆರು ತಿಂಗಳಿಗೊಮ್ಮೆ ಲಸಿಕೆ ನೀಡಿ, 2030ರ ಒಳಗಾಗಿ ರೋಗ ನಿರ್ಮೂಲನೆ ಮಾಡುವ ಯೋಜನೆ ಹಾಕಿಕೊಳ್ಳಲಾಗಿದೆ. ಇದರಿಂದ ಜಾನುವಾರುಗಳ ಉತ್ಪಾದನೆ ಹೆಚ್ಚಾಗುವುದರ ಜೊತೆಗೆ, ಜಾನುವಾರು ಉತ್ಪನ್ನಗಳ ರಫ್ತಿಗೆ ಅವಕಾಶ ಸಿಗುತ್ತದೆ. ಈ ಮೂಲಕ ರೈತರ ಆದಾಯ ಹೆಚ್ಚಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ವಿವರಿಸಿದರು.



ನವೆಂಬರ್ 3ರಿಂದ ಡಿಸೆಂಬರ್ 2, 2025ರವರೆಗೆ 8ನೇ ಸುತ್ತಿನ ಕಾಲು ಬಾಯಿ ಬೇನೆ ಲಸಿಕೆ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಸುಮಾರು 1,34,986 ದನ ಮತ್ತು 45,247 ಎಮ್ಮೆಗಳಿಗೆ ರೈತರ ಮನೆ ಬಾಗಿಲಲ್ಲೇ ಉಚಿತವಾಗಿ ಲಸಿಕೆಯನ್ನು ಅಭಿಯಾನದಲ್ಲಿ ಹಾಕುವುದಾಗಿ ಅವರು ತಿಳಿಸಿದರು.

ಅಭಿಯಾನ ಕಾರ್ಯಕ್ರಮಕ್ಕೆ ಬೇಕಾಗಿರುವ 1.9 ಲಕ್ಷ ಡೋಸ್ ಲಸಿಕೆ ಸರಬರಾಜಾಗಿದ್ದು, ಸಿರಿಂಜ್, ಪ್ರಚಾರ ಸಾಮಗ್ರಿ, ತುರ್ತು ಔಷಧ ಇತ್ಯಾದಿಗಳನ್ನು ಸಂಗ್ರಹಿಸಲಾಗಿದೆ ಎಂದು ಮಾಹಿತಿ ನೀಡಿದರು.

ಪಶುಪಾಲನಾ ಇಲಾಖೆಯ ನವಲಗುಂದ ತಾಲೂಕು ಮುಖ್ಯ ಪಶು ವೈದ್ಯಾಧೀಕಾರಿ ಡಾ. ಮೋಹನ ದ್ಯಾಬೇರಿ ಅವರು ಕಾರ್ಯಕ್ರಮ ನಿರೂಪಿಸಿ, ವಂದಿಸಿದರು. ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಪ್ರೊಬೇಷನರಿ ಐಎಎಸ್ ಅಧಿಕಾರಿ ರಿತಿಕಾ ವರ್ಮಾ, ಪಶುಪಾಲನಾ ಮತ್ತು ಪಶುವೈದ್ಯಕೀಯ ಇಲಾಖೆಯ ಅಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

> ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ. ಎಸ್.ವಿ. ಸಂತಿ ಮಾತನಾಡಿ, ಅಭಿಯಾನದ ಯಶಸ್ವಿಗಾಗಿ ಎಲ್ಲ ಗ್ರಾಮ, ಪಟ್ಟಣಗಳನ್ನು ಸುಮಾರು 100 ಜಾನುವಾರುಗಳನ್ನು ಹೊಂದಿರುವ 1,779 ಬ್ಲಾಕ್‌ಗಳನ್ನಾಗಿ ವಿಂಗಡಿಸಿ, ಮೈಕ್ರೋಪ್ಲ್ಯಾನ್ ಸಿದ್ಧಪಡಿಸಲಾಗಿದೆ. ಪ್ರತಿ ಬ್ಲಾಕ್‌ನಲ್ಲಿರುವ ಜಾನುವಾರು ಮಾಲೀಕರ ಮಾಹಿತಿ ಸಂಗ್ರಹಿಸಲಾಗಿದೆ ಹಾಗೂ ಲಸಿಕೆದಾರರ 110 ತಂಡಗಳನ್ನು ರಚಿಸಲಾಗಿದೆ. ಇಬ್ಬರು ಲಸಿಕೆದಾರರ ಒಂದು ತಂಡ ಪ್ರತಿ ದಿನ ಒಂದು ಬ್ಲಾಕ್‌ಗೆ ಭೇಟಿ ನೀಡಿ ಎಲ್ಲ ಜಾನುವಾರುಗಳಿಗೆ ಲಸಿಕೆ ನೀಡಲಾಗುವುದು ಎಂದು ಸಭೆಯಲ್ಲಿ ವಿವರಿಸಿದರು.

# ಹನುಮನ ಸ್ಮರಣೆಯಿಂದ ದೋಷಗಳು ದೂರ



**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಹನುಮಾನ ಚಾಲೀಸಾ ಪಠಣದಿಂದ ಮನಸ್ಸಿಗೆ ಶಾಂತಿ ದೊರಕುತ್ತದೆ. ನಿತ್ಯವೂ ಈ ಪಾಠವನ್ನು ಪಠಣೆ ಮಾಡುವುದರಿಂದ ಮನಸ್ಸಿನಲ್ಲಿನ ಭಯ ಇತ್ಯಾದಿಗಳು ದೂರವಾಗುತ್ತವೆ. ಆದ್ದರಿಂದ ದಿನಕ್ಕೆ ಒಮ್ಮೆಯಾದರೂ ಮನೆಯಲ್ಲಿ ಹನುಮಾನ ಚಾಲೀಸಾ ಪಠಣೆ ಮಾಡಬೇಕೆಂದು ಎ.ಜಿ. ಕುಲಕರ್ಣಿ ಹೇಳಿದರು.

ಪಟ್ಟಣದ ಜಕ್ಕಲಿ ಕ್ರಾಸ್‌ನಲ್ಲಿರುವ ಶ್ರೀ ಮಾರುತಿ ಮಂದಿರದಲ್ಲಿ ನರೇಗಲ್ಲ ಬ್ರಹ್ಮ ಸಮಾಜದಿಂದ ಆಚರಿಸಲಾದ ಹನುಮಾನ ಚಾಲೀಸಾ ಪಠಣೆಯ ನಂತರ ಅವರು ಮಾತನಾಡಿದರು.

ಹನುಮಂತ ಶಕ್ತಿ, ಯುಕ್ತಿಗೆ ಹೆಸರಾದ ದೇವರು. ನಂಬಿದವರನ್ನು ಹೇಗೆ ಪೊರೆಯಬೇಕು ಎಂಬುದನ್ನು ಅವನ ಚರಿತ್ರೆಯಿಂದ ನಾವು ತಿಳಿಯಬಹುದು. ಇಂತಹ ಸ್ವಾಮಿ ನಿಷ್ಠೆಯುಳ್ಳ ಹನುಮಂತನ ಪಠಣೆ ಮಾಡುವುದರಿಂದ ಸರ್ವ ದೋಷಗಳೂ ನಿವಾರಣೆಯಾಗುತ್ತವೆ ಎಂದು ಕುಲಕರ್ಣಿ ಹೇಳಿದರು.

ಶ್ರೀ ದತ್ತಭಕ್ತ ಮಂಡಳಿಯ ಅಧ್ಯಕ್ಷ ಡಾ. ನಾಗರಾಜ ಗ್ರಾಮಪುರೋಹಿತ ಮಾತನಾಡಿ, ಹನುಮಾನ ಚಾಲೀಸಾ ಪಠಣೆಯ ಸವಿರುಚಿಯನ್ನು ನಮಗೆ ಹತ್ತಿಸಿದವರು ಶ್ರೀಕ್ಷೇತ್ರ ಹೆಬ್ಬಳ್ಳಿಯ ಪರಮಪೂಜ್ಯ ಶ್ರೀ ದತ್ತಾವಧೂತ ಗುರುಗಳು. ನರೇಗಲ್ಲನ್ನೊಳಗೊಂಡಂತೆ ನಾಡಿನ ಹಲವಾರು ಕಡೆಗಳಲ್ಲಿ ಅವರು ಭಕ್ತರಿಂದ ಹನುಮಾನ ಚಾಲೀಸಾ ಹೇಳಿಸುತ್ತಿದ್ದಾರೆ. ನವೆಂಬರ್‌ನಲ್ಲಿ ಅವರು ಹುಬ್ಬಳ್ಳಿಯಲ್ಲಿ 100 ತಾಸುಗಳ ಹನುಮಾನ ಚಾಲೀಸಾ ಪಠಣೆಯನ್ನು ಇರಿಸಿಕೊಂಡಿದ್ದಾರೆ. ಅವರ ಅಣತಿಯಂತೆ ನರೇಗಲ್ಲದ ಸದ್ಭಕ್ತರು ಅಲ್ಲಿಗೆ ತೆರಳಿ, ಹನುಮಾನ ಚಾಲೀಸಾ ಪಠಣೆಯಲ್ಲಿ ಪಾಲ್ಗೊಳ್ಳುವ ಯೋಜನೆಯನ್ನು ಹಾಕಿಕೊಂಡಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಎಸ್.ಎಚ್. ಕುಲಕರ್ಣಿ, ಆನಂದ ಕುಲಕರ್ಣಿ, ಪ್ರಶಾಂತ ಗ್ರಾಮಪುರೋಹಿತ, ಆನಂದ ಕಾಳೆ, ರಂಗಣ್ಣ ಕುಲಕರ್ಣಿ, ಎ.ಎ. ಕುಲಕರ್ಣಿ, ನಾಗೇಶ ಗ್ರಾಮಪುರೋಹಿತ, ನಾಗರಾಜ ನಾಡಿಗೇರ, ಆದರ್ಶ ಕುಲಕರ್ಣಿ, ಅರುಣ ಗ್ರಾಮಪುರೋಹಿತ, ಬಾಬು ಕಾಳೆ, ಪರಿಮಳಾ ಗ್ರಾಮಪುರೋಹಿತ, ಪದ್ಮಾ ಕುಲಕರ್ಣಿ, ಅರ್ಚನಾ ಕುಲಕರ್ಣಿ, ರೇಣುಕಾ ಗ್ರಾಮಪುರೋಹಿತ, ಭಾಗ್ಯಾಬಾಯಿ ಕಾಳೆ, ರೂಪಾ ಕುಲಕರ್ಣಿ, ಪ್ರತೀಕ್ಷಾ ಕುಲಕರ್ಣಿ, ಭಾರತಿಬಾಯಿ ಗ್ರಾಮಪುರೋಹಿತ, ನಿಖಿತಾ ಗ್ರಾಮಪುರೋಹಿತ, ಲಕ್ಷ್ಮಿ ಗ್ರಾಮಪುರೋಹಿತ, ಸನ್ಮತಿ ಸದರಜೋಷಿ, ಅನಿತಾ ಗ್ರಾಮಪುರೋಹಿತ, ಜ್ಯೋತಿ ನಾಡಿಗೇರ, ಜಯಶ್ರೀ ಗ್ರಾಮಪುರೋಹಿತ, ಶೋಭಾ ಸೂರಭಟ್ಟನವರ, ಪಲ್ಲವಿ ಗ್ರಾಮಪುರೋಹಿತ, ಅನುಪಮಾ ಗ್ರಾಮಪುರೋಹಿತ ಮುಂತಾದವರಿದ್ದರು.

# ನಾಳೆ ರಾಜ್ಯ ಮಟ್ಟದ ಮಲ್ಲಕಂಬ ಕ್ರೀಡಾಕೂಟ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ರಾಜ್ಯಮಟ್ಟದ ಮಲ್ಲಕಂಬ ಕ್ರೀಡಾಕೂಟ-2025 ನವೆಂಬರ 2 ರಂದು ರವಿವಾರ ಬೆಳಗ್ಗೆ 10 ಗಂಟೆಗೆ ನಗರದ ಕೆ.ಎಚ್ ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗುವುದು.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್. ಕೆ. ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ, ವಿಧಾನ ಪರಿಷತ್ ಶಾಸಕರು ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ.ಆರ್.ಪಾಟೀಲ, ವಿಧಾನ ಪರಿಷತ್ ಶಾಸಕ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಶ್ರೀಮತಿ ಜಾನಕಿ ಕೆ.ಎಂ, ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಆಗಮಿಸುವರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್. ಎಸ್. ಬುರಡಿ, ಡಯಟ್ ಉಪನಿರ್ದೇಶಕಿ ಮಂಗಲಾ ಬಿ. ತಾಪಸ್ಕರ್, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿಗಳು ಎನ್. ಆರ್. ನಿಡಗುಂದಿ ಸ್ವಾಗತ ಕೋರಿದ್ದಾರೆ.

**'ಎಲ್ಲಾ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಕನ್ನಡ' ಕುರಿತು ವಿಶೇಷ ಉಪನ್ಯಾಸ**

# ಕನ್ನಡ ಅಧ್ಯಯನದಿಂದ ಉತ್ತಮ ಭವಿಷ್ಯ




**■ ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡದ ಪುಸ್ತಕಗಳ ಓದುವಿಕೆಯಲ್ಲಿ ವಿದ್ಯಾರ್ಥಿಗಳು ಹೆಚ್ಚಿನ ಆಸಕ್ತಿ ಹೊಂದಿದಾಗ ಸ್ಪರ್ಧಾತ್ಮಕ ಯುಗದಲ್ಲಿ ಪ್ರತಿ ವಿದ್ಯಾರ್ಥಿಯೂ ಯೋಗ್ಯ ಜ್ಞಾನ, ಸ್ಪಷ್ಟ ಸಂವಹನ ಹಾಗೂ ಭಾಷಾ ಪಟುವಾಗಿ ಹೊರಹೊಮ್ಮಿ ಉತ್ತಮ ಉದ್ಯೋಗ ಹೊಂದಲು ಸಾಧ್ಯವಾಗಲಿದೆ ಎಂದು ಧಾರವಾಡ ಮೇರು ಐಎಎಸ್, ಕೆಎಎಸ್ ಅಧ್ಯಯನ ಕೇಂದ್ರದ ನಿರ್ದೇಶಕ, ಅಂಜುಮನ್ ಕಾಲೇಜಿನ ಡಾ. ರುದ್ರೇಶ ಮೇಟಿ ಹೇಳಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಐಕ್ಯೂಎಸಿ ಕಾರ್ಯಕ್ರಮದಡಿ 'ಎಲ್ಲಾ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಕನ್ನಡ' ಕುರಿತು ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ಅವರು, ಶಿಕ್ಷಕರ ಅರ್ಹತಾ ಪರೀಕ್ಷೆಗಳು, ಬ್ಯಾಂಕ್, ರೈಲ್ವೆ ಹಾಗೂ ಇತರೆ ಕೇಂದ್ರ-ರಾಜ್ಯ ಸೇವಾ ಪರೀಕ್ಷೆಗಳಲ್ಲಿ ಕನ್ನಡ ಅಭ್ಯಾಸ ಅನಿವಾರ್ಯವಾಗಿದೆ. ಕನ್ನಡ ಕೇವಲ ಒಂದು ವಿಷಯವಲ್ಲ, ನಮ್ಮ ಸಂಸ್ಕೃತಿ, ಸಂವಿಧಾನದ ಮತ್ತು ಆಡಳಿತ ಪ್ರಕ್ರಿಯೆ ವ್ಯವಸ್ಥೆಗೆ ಕೊಂಡಿಯಾಗಿ ಕೆಲಸಮಾಡುತ್ತದೆ. ಆ ಹಿನ್ನೆಲೆಯಲ್ಲಿ ಕನ್ನಡ ಅಧ್ಯಯನದಲ್ಲಿ ವಿದ್ಯಾರ್ಥಿಗಳು ತಮ್ಮ ನಿರಂರತವಾಗಿ ತೊಡಗಿಸಿಕೊಂಡರೆ ನಿಮ್ಮ ಭವಿಷ್ಯ ಉತ್ತಮವಾಗಿರಲಿದೆ ಎಂದು ಹೇಳಿದರು.

ಪ್ರಾಚಾರ್ಯರಾದ ಡಾ. ಶಾಂತಾ ಪೂಜಾರ ಮಾತನಾಡಿ, ಭಾಷೆ ಒಂದು ಸಂಸ್ಕೃತಿಯ ದಾರಿ. ಕನ್ನಡ ಭಾಷೆ ನಮ್ಮ ಸಂಪ್ರದಾಯ. ಆ ಹಿನ್ನೆಲೆಯಲ್ಲಿ ಕನ್ನಡ ಸಂಸ್ಕೃತಿ ಮತ್ತು ಇತಿಹಾಸವನ್ನು ಜೀವಂತವಾಗಿರಿಸುತ್ತದೆ. ಕನ್ನಡ ಪ್ರತಿಯೊಬ್ಬರಿಗೆ ಜ್ಞಾನದ ಸುಧೆಯ ಬುಗ್ಗೆ ಎಂದು ಹೇಳಿದರು.

ವ್ಯವಸ್ಥಾಪಕ ಬಿ.ಎಫ್. ಕರಬುಡ್ಡಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಪ್ರೊ. ಎಸ್.ಯು. ಸಜ್ಜನಶೆಟ್ಟರ, ಪ್ರಕಾಶ ಕರಿಗಾರ, ಪ್ರೊ. ಎ.ಕೆ. ಜಮಾದಾರ್, ಐ.ಕ್ಯೂ.ಎ.ಸಿ ಸಂಚಾಲಕರಾದ ಪ್ರೊ. ಮಹಬೂಬ ಆರಿಫ್ ಸದರಸೋಫೆವಾಲೆ, ಡಾ. ಸುಜಾತಾ ಬರದೂರ, ಪ್ರೊ. ಸತೀಶ ಸರ್ವಿ, ಪ್ರೊ. ದ್ಯಾಮಣ್ಣ ಮನಿಕಟ್ಟಿ, ಪ್ರೊ. ರಿಯಾಜಅಹ್ಮದ ದೊಡ್ಡಮನಿ, ಪ್ರೊ. ಪ್ರತಿಭಾ ಚವ್ಹಾಣ, ಪ್ರೊ. ಸುಮಿತ್ರಾ ಮೇದಾರ, ಪ್ರೊ. ವಹಿದಾ ಕಿಲ್ಲೇದಾರ, ರಾಜೇಶ್ವರಿ ಬದನಿಕಾಯಿ, ಬಸುರಾಜ ಡಾನಿ, ಶ್ರೀದೇವಿ ಸೇರಿದಂತೆ ಬೋಧಕ ಮತ್ತು ಬೋಧಕೇತರ ಸಿಬ್ಬಂದಿವರ್ಗ, ವಿದ್ಯಾರ್ಥಿನಿಯರು ಇದ್ದರು.

# ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**■ ವಿಜಯಸಾಕ್ಷಿ ಸುದ್ದಿ, ಗದಗ**

2025-26ನೇ ಸಾಲಿನಲ್ಲಿ ಪಿಯುಸಿ ಹೊರತುಪಡಿಸಿ ಉಳಿದ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ -1 ಅಲೆಮಾರಿ / ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿ ವೇತನ, ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಮತ್ತು ಶುಲ್ಕ ಮರುಪಾವತಿ ಯೋಜನೆಗಳ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕವನ್ನು ನವೆಂಬರ್ 15 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

# ಕಸಾಪ: ರಾಜ್ಯೋತ್ಸವ ಕಾರ್ಯಕ್ರಮ ಇಂದು

**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ನ. 1ರಂದು ಸಂಜೆ 6 ಗಂಟೆಗೆ ಕಸಾಪ ಕಾರ್ಯಾಲಯದ ತೆ-ೂಂಟದ ಸಿದ್ದಲಿಂಗ ಶ್ರೀಗಳ ಕನ್ನಡ ಭವನದಲ್ಲಿ 70ನೇ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ಉಪನ್ಯಾಸ, ಗೀತಗಾಯನ, ಸಾಧಕರಿಗೆ ಸನ್ಮಾನ ಹಾಗೂ ಭುವನೇಶ್ವರಿಗೆ ದೀಪಾರಾಧನೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಎಡೆಯೂರು ತೋಂಟ-ದಾರ್ಯ ಸಂಸ್ಥಾನ ಮಠ ಡಂಬಳ-ಗದಗ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸಾನಿಧ್ಯ ವಹಿಸುವರು. ವಿ.ಪ ಸದಸ್ಯ ಪ್ರೊ. ಎಸ್.ವಿ. ಸಂಕನೂರ ಕಾರ್ಯಕ್ರಮ ಉದ್ಘಾಟಿಸುವರು. ಶತಮಾನ ಕಂಡ ನಾಡಗೀತೆ ವಿಷಯವಾಗಿ ಮುಳಗುಂದ ಆರ್. ಎನ್. ದೇಶಪಾಂಡೆ ಕಾಲೇಜಿನ ಪ್ರಾಚಾರ್ಯ ಡಾ. ರಮೇಶ ಕಲ್ಲನಗೌಡರ ಮಾತನಾಡುವರು. ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಅಧ್ಯಕ್ಷತೆ ವಹಿಸುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಸಾಹಿತಿಗಳು, ಪರಿಷತ್ತಿನ ಸದಸ್ಯರು ಭಾಗವಹಿಸಬೇಕೆಂದು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಡಿ.ಎಸ್. ಬಾಪುರಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.


**ವಿಮಾ ಹಣವನ್ನು ನಿರಾಕರಿಸಿದ ಸ್ಟಾರ್ ಹೆಲ್ತ್ ಇನ್ಸುರೆನ್ಸ್ ಕಂಪನಿ**

# ಆಸ್ಪತ್ರೆ ಖರ್ಚು ನೀಡದ ಕಂಪನಿಗೆ ದಂಡ

**■ ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡದ ನಿವಾಸಿ ತಿಲಕ್ ಯಲಿಗಾರ ಎನ್ನುವವರು ಎದುರುದಾರ ಸ್ಟಾರ್ ಹೆಲ್ತ್ ಇನ್ಸುರೆನ್ಸ್ ಕಂಪನಿಯಲ್ಲಿ 5 ಲಕ್ಷ ರೂ.ಗಳಿಗೆ ತಮ್ಮ ಆರೋಗ್ಯ ವಿಮೆ ಮಾಡಿಸಿದ್ದರು. ಅವರು ಪ್ರತಿ ವರ್ಷ ರೂ 19,369 ವಿಮಾ ಕಂತನ್ನು ತುಂಬುತ್ತಿದ್ದರು. ವಿಮಾ ಅವಧಿ 15.01.2023ರಿಂದ 14.01.2024ರವರೆಗೆ ಚಾಲ್ತಿಯಲ್ಲಿತ್ತು.

10.10.2023ರಂದು ದೂರುದಾರರು ಜ್ವರ ಮತ್ತು ಅಶಕ್ತತನದಿಂದ ಧಾರವಾಡದ ನಿರ್ಮಲಾ ಮಲ್ಟಿಸ್ಪೆಶಾಲಿಟಿ ಆಸ್ಪತ್ರೆಯಲ್ಲಿ ಡಾ. ಶಿವಕುಮಾರ ತುರಮರಿ ಇವರಿಗೆ ತೋರಿಸಲು ವೈದ್ಯರು ಪರೀಕ್ಷಿಸಿ ದೂರುದಾರರಿಗೆ ಆಸ್ಪತ್ರೆಯಲ್ಲಿ ದಾಖಲಾಗಲು ಹೇಳಿದ್ದರು. ಅದರಂತೆ ದೂರುದಾರರು ದಾಖಲಾಗಿ ಚೇತರಿಸಿಕೊಂಡ ನಂತರ ಚಿಕಿತ್ಸೆಯ ಮೊತ್ತ 15 ಸಾವಿರ ರೂ.ಗಳನ್ನು ಪಾವತಿಸುವಂತೆ ಎದುರುದಾರರಿಗೆ ದಾಖಲೆಗಳೊಂದಿಗೆ ಕೇಳಿಕೊಂಡಿದ್ದರು.




ಆದರೆ, ಎದುರುದಾರರು ಆಸ್ಪತ್ರೆಯ ದಾಖಲೆ ಅವಶ್ಯಕತೆ ಇರಲಿಲ್ಲ ಎಂದು ಹೇಳಿ ಅವರ ಕ್ಲೇಮ್‌ನ್ನು ನಿರಾಕರಿಸಿರುತ್ತಾರೆ. ವಿಮಾ ಕಂಪನಿಯವರ ಅಂತಹ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಎಂದು ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ದೂರುದಾರರು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ಈಶಪ್ಪ ಭೂತೆ ಹಾಗೂ ಸದಸ್ಯೆ ವಿಶಾಲಾಕ್ಷಿ ಅ.ಬೋಳಶೆಟ್ಟಿ, ದೂರುದಾರರು ಹಾಜರುಪಡಿಸಿದ ದಾಖಲೆಗಳನ್ನು ಅವಲೋಕಿಸಿದಾಗ, ದೂರುದಾರರು ವೈದ್ಯರ ಹೇಳಿಕೆ ಮೇರೆಗೆ ಆಸ್ಪತ್ರೆಯಲ್ಲಿ ದಾಖಲಾಗಿರುವುದು ಕಂಡು ಬಂದಿದೆ ಮತ್ತು ಎದುರುದಾರರು ಇದನ್ನು ನಿರಾಕರಿಸಿರುವುದು ಗ್ರಾಹಕರ ರಕ್ಷಣಾ ಕಾಯ್ದೆಯಡಿ ಸೇವಾ ನ್ಯೂನ್ಯತೆ ಆಗುತ್ತದೆ ಎಂದು ಆಯೋಗ ತನ್ನ ತೀರ್ಪಿನಲ್ಲಿ ಹೇಳಿ, ಎದುರುದಾರರಿಗೆ ತೀರ್ಪು ನೀಡಿದ ಒಂದು ತಿಂಗಳ ಒಳಗಾಗಿ ದೂರುದಾರರ ವೈದ್ಯಕೀಯ ವೆಚ್ಚದ ಹಣ ರೂ.15,000 ಮತ್ತು ಅದರ ಮೇಲೆ ದೂರು ಹಾಕಿದ ದಿನಾಂಕದಿಂದ ಪಾವತಿಯಾಗುವ ತನಕ ಶೇ. 10ರಂತೆ ಬಡ್ಡಿ ಲೆಕ್ಕ ಹಾಕಿ ನೀಡುವಂತೆ ಆಯೋಗ ವಿಮಾ ಕಂಪನಿಗೆ ಆದೇಶಿಸಿದೆ.

> ದೂರುದಾರರಿಗೆ ಆಗಿರುವ ತೊಂದರೆ ಮತ್ತು ಅನಾನುಕೂಲಕ್ಕಾಗಿ 25 ಸಾವಿರ ರೂ ಪರಿಹಾರ ಮತ್ತು 5 ಸಾವಿರ ರೂ ಪ್ರಕರಣದ ಖರ್ಚು-ವೆಚ್ಚ ನೀಡುವಂತೆ ವಿಮಾ ಕಂಪನಿಗೆ ನಿರ್ದೇಶಿಸಿದೆ. ಈ ದೂರಿನಲ್ಲಿ ಅನಾವಶ್ಯಕವಾಗಿ ವೈದ್ಯರನ್ನು ಎದುರುದಾರರಾಗಿ ಸೇರಿಸಿರುವುದು ತಪ್ಪು ಎಂದು ಪರಿಗಣಿಸಿ ವೈದ್ಯರ ವಿರುದ್ಧ ದೂರನ್ನು ವಜಾಗೊಳಿಸಿದ ಆಯೋಗ, ದೂರುದಾರರು ದಂಡ ರೂಪವಾಗಿ 5 ಸಾವಿರ ರೂ.ಗಳನ್ನು ವೈದ್ಯರಿಗೆ ಕೊಡುವಂತೆ ತನ್ನ ತೀರ್ಪಿನಲ್ಲಿ ಹೇಳಿದೆ.

# ಚಿತ್ತಾಪುರ ಸಂಘರ್ಷ: ನವೆಂಬರ್ 5 ಕ್ಕೆ ಬೆಂಗಳೂರಿನಲ್ಲಿ ಶಾಂತಿ ಸಭೆ

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಚಿತ್ತಾಪುರದಲ್ಲಿ ಆರೆಸ್ಸೆಸ್ ನ ನವೆಂಬರ್ 2 ರಂದು ನಡೆಸಲು ಉದ್ದೇಶಿಸಿದ್ದ ಸಮಾಜದ ಶಾಂತಿ ಕದಡುವ ಪಥಸಂಚಲನವನ್ನು ವಿರೋಧಿಸಿ ದಲಿತ ಸಂಘಟನೆಗಳು ತಮಗೂ ಅಂದೇ, ಅದೇ ಮಾರ್ಗದಲ್ಲಿ ಸಂವಿಧಾನ ಮೆರವಣಿಗೆ ಮಾಡಲು ಅವಕಾಶ ನೀಡಬೇಕೆಂದು ಆಗ್ರಹಿಸಿದ್ದವು. ಜಿಲ್ಲಾಡಳಿತ ಅನುಮತಿಯನ್ನು ನಿರಾಕರಿಸಿದ್ದರು.

## ಬಿಹಾರ ಚುನಾವಣೆಗೆ ಎನ್‌ಡಿಎ ಪ್ರಣಾಳಿಕೆ ಬಿಡುಗಡೆ; ಒಂದು ಕೋಟಿ ಉದ್ಯೋಗ ಸೇರಿದಂತೆ ಹಲವು ಭರವಸೆ

■ವಿಜಯಸಾಕ್ಷಿ ಸುದ್ದಿ, ಬಿಹಾರ

ಬಿಹಾರ ವಿಧಾನಸಭಾ ಚುನಾವಣೆಗೆ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (ಎನ್‌ಡಿಎ) ಶುಕ್ರವಾರ ತನ್ನ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದ್ದು, ಒಂದು ಕೋಟಿ ಉದ್ಯೋಗಗಳನ್ನು ಸೃಷ್ಟಿಸುವುದು, ಕೈಗಾರಿಕಾ ಬೆಳವಣಿಗೆಯನ್ನು ಹೆಚ್ಚಿಸುವುದು ಮತ್ತು ರಾಜ್ಯಾದ್ಯಂತ ಮೂಲಸೌಕರ್ಯಗಳನ್ನು ವಿಸ್ತರಿಸುವುದಾಗಿ ಪ್ರತಿಜ್ಞೆ ಮಾಡಿದೆ. ಈ ದಾಖಲೆಯನ್ನು ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು ಪಾಟ್ನಾದಲ್ಲಿ ಬಿಜೆಪಿ ಅಧ್ಯಕ್ಷ ಜೆಪಿ ನಡ್ಡಾ, ಕೇಂದ್ರ ಸಚಿವರಾದ ಜಿತನ್ ರಾಮ್ ಮಾಂಝಿ ಮತ್ತು ಚಿರಾಗ್ ಪಾಸ್ವಾನ್ ಮತ್ತು ಆರ್‌ಎಲ್‌ಎಂ ಮುಖ್ಯಸ್ಥ ಉಪೇಂದ್ರ ಕುಶ್ವಾಹ ಅವರೊಂದಿಗೆ ಬಿಡುಗಡೆ ಮಾಡಿದರು.

ಬಿಜೆಪಿಯ ಬಿಹಾರ ಮುಖ್ಯಸ್ಥ ದಿಲೀಪ್ ಜೈಸ್ವಾಲ್ ಅವರು ಪ್ರಣಾಳಿಕೆಯನ್ನು "ಪ್ರಧಾನಿ ನರೇಂದ್ರ ಮೋದಿಯವರ ಭರವಸೆ ಮತ್ತು ಬಿಹಾರ ಸಿಎಂ ನಿತೀಶ್ ಕುಮಾರ್ ಅವರ ವಿಶ್ವಾಸ" ಎಂದು ಬಣ್ಣಿಸಿದ್ದಾರೆ. ಮೈತ್ರಿಕೂಟದ ಪಾಲುದಾರರು ಮಹಾಭಾರತದ ಪಾಂಡವರಂತೆ ಏಕತೆಯನ್ನು ಸಂಕೇತಿಸುತ್ತಾರೆ ಎಂದಿರುವ ಅವರು "ಬಿಹಾರದ ಜನರು ಪ್ರಧಾನಿ ಮೋದಿ ಮತ್ತು ಸಿಎಂ ನಿತೀಶ್ ಕುಮಾರ್ ಅವರ ಭರವಸೆಗಳನ್ನು ನಂಬುತ್ತಾರೆ" ಎಂದು ವಿಶ್ವಾಸ ವ್ಯಕ್ತಪಡಿಸಿದರು. ಇದೇ ವೇಳೆ "ಬಿಹಾರದ ನಾಶಕ್ಕಾಗಿ" ಸಾರ್ವಜನಿಕರು "ರಾಹುಲ್ ಗಾಂಧಿ ಮತ್ತು ತೇಜಸ್ವಿ ಯಾದವ್" ಅವರನ್ನು ಎಂದಿಗೂ ಕ್ಷಮಿಸುವುದಿಲ್ಲ ಎಂದು ಹೇಳಿದರು.ಈ ಮೈತ್ರಿಕೂಟದ ಪ್ರಣಾಳಿಕೆಯು ಉದ್ಯೋಗ ಸೃಷ್ಟಿ, ಮಹಿಳಾ ಸಬಲೀಕರಣ ಮತ್ತು ಮೂಲಸೌಕರ್ಯ, ಶಿಕ್ಷಣ ಮತ್ತು ಆರೋಗ್ಯ ರಕ್ಷಣೆಯಲ್ಲಿ ಬೃಹತ್ ಹೂಡಿಕೆಗಳನ್ನು ಕೇಂದ್ರೀಕರಿಸುತ್ತದೆ.

'ವಿಶ್ವ ಪಾರ್ಶ್ವವಾಯು ದಿನ' ಕಾರ್ಯಕ್ರಮದಲ್ಲಿ ಡಾ. ರಾಜೇಂದ್ರ ಸಿ.ಬಸರಿಗಿಡದ

# ಪಾರ್ಶ್ವವಾಯುವಿನ ಲಕ್ಷಣಗಳನ್ನು ತಕ್ಷಣ ಗುರುತಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚಿನ ದಿನಗಳಲ್ಲಿ ಪಾರ್ಶ್ವವಾಯು ಸಮಸ್ಯೆ ಸಮಾಜದಲ್ಲಿ ಹೆಚ್ಚಾಗುತ್ತಿದ್ದು, ಪಾರ್ಶ್ವವಾಯುವಿನಿಂದ ಕುಟುಂಬ/ಸಮಾಜ ಆರ್ಥಿಕವಾಗಿ, ಸಾಮಾಜಿಕವಾಗಿ ಹಿಂದೆ ಉಳಿಯುತ್ತಿದೆ. ಪಾರ್ಶ್ವವಾಯುವಿನ ಲಕ್ಷಣಗಳನ್ನು ಬೇಗನೆ ಗುರುತಿಸಿ ಚಿಕಿತ್ಸೆ ಪಡೆಯುವಿಕೆ ಹಾಗೂ ತಡೆಗಟ್ಟುವುದು ಅತ್ಯವಶ್ಯಕವಾಗಿದೆ ಎಂದು ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ರಾಜೇಂದ್ರ ಸಿ.ಬಸರಿಗಿಡದ ತಿಳಿಸಿದರು.




ಜಿಲ್ಲಾಡಳಿತ ಗದಗ, ಜಿಲ್ಲಾ ಪಂಚಾಯಿತಿ ಗದಗ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ, ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ವಿಭಾಗ, ಕೆ.ಎಚ್. ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜನರಲ್ ಮೆಡಿಸಿನ್ ಮುಖ್ಯಸ್ಥರಾದ ಡಾ. ಸಂಗಮೇಶ ಅಸೂಟಿ ಅಧ್ಯಕ್ಷತೆಯಲ್ಲಿ ಶುಕ್ರವಾರ ಜರುಗಿದ ವಿಶ್ವ ಪಾರ್ಶ್ವವಾಯು ದಿನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪಾರ್ಶ್ವವಾಯು ಬಾಧಿತ ರೋಗಿಗಳು ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಕಾರ್ಯಕ್ರಮದ ಸದುಪಯೋಗ ಪಡೆಯಬೇಕು. ಕೆ.ಎಚ್. ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಹೊಸ ಕಟ್ಟಡ ಕೊಠಡಿ ಸಂಖ್ಯೆ: 105ರಲ್ಲಿ ಪ್ರತಿನಿತ್ಯ ಮೆದುಳು ಆರೋಗ್ಯ ಕ್ಲಿನಿಕ್‌ಗೆ ಭೇಟಿ ನೀಡಿ ಚಿಕಿತ್ಸೆ ಮನೋಸಾಮಾಜಿಕ ಬೆಂಬಲ ಫಿಜಿಯೋಥೆರಪಿ ಹಾಗೂ ಸ್ಪೀಚ್ ಥೆರಪಿ ಸೌಲಭ್ಯವನ್ನು ಪಡೆದು ಪಾರ್ಶ್ವವಾಯುವಿನಿಂದ ಗುಣಮುಖವಾಗಲು ತಿಳಿಸಿದರು.

ಶ್ವಾಸಕೋಶ ತಜ್ಞರಾದ ಡಾ. ಇರ್ಫಾನ್ ಎಮ್ ಮಾತನಾಡಿ, ಸಮಾಜದಲ್ಲಿ ಮೂಢ ನಂಬಿಕೆಗಳಿಂದ ಆಚರಣೆಯಲ್ಲಿರುವ ವಿವಿಧ ಚಿಕಿತ್ಸೆಗೆ ಒಳಗಾಗಿ ರೋಗವನ್ನು ಹೆಚ್ಚು ಮಾಡಿಕೊಳ್ಳದೆ ತಜ್ಞ ವೈದ್ಯರನ್ನು ಭೇಟಿ ಮಾಡಿ ಸರಿಯಾದ ಸಮಯಕ್ಕೆ ಸರಿಯಾದ ಚಿಕಿತ್ಸೆಯನ್ನು ಪಡೆದುಕೊಂಡು ಪಾರ್ಶ್ವವಾಯುವಿನಿಂದ ಮುಕ್ತರಾಗಲು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಕೆ.ಎಚ್.ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಅಸಂಕ್ರಾಮಿಕ ರೋಗಗಳ ವಿಭಾಗದ ಮುಖ್ಯಸ್ಥ ಡಾ. ಅರುಣಕುಮಾರ ಮಾತನಾಡಿ, ವಿಶ್ವ ಪಾರ್ಶ್ವವಾಯು ದಿನ–2025ರ ಘೋಷವಾಕ್ಯ 'ಪ್ರತಿ ನಿಮಿಷವೂ ಮುಖ್ಯ' ಎಂಬುದರ ಕುರಿತು ಮಾತನಾಡಿ, ರೋಗಿಗಳಿಗೆ ಒಂದು ನೀಮಿಷವೂ ಸಹ ಬಂಗಾರದಂತಹ ಸಮಯವಾಗಿದ್ದು, ಸಮಯವನ್ನು ಕಳೆಯದೆ ಚಿಕಿತ್ಸೆಗೆ ತುರ್ತಾಗಿ ಸ್ಪಂದಿಸುವುದು ಅತೀ ಅವಶ್ಯಕ ಎಂದು ತಿಳಿಸಿದರು.

ಕೆ.ಎಚ್.ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಎನ್.ಸಿ.ಡಿ ವಿಭಾಗದ ವೈದ್ಯಕೀಯ ಅಧಿಕಾರಿಗಳಾದ ಡಾ. ಅರ್ಪಿತಾ ಮಾತನಾಡಿ, ಗ್ರಾಮೀಣ ರೋಗಿಗಳು ಪ್ರಥಮ ಚಿಕಿತ್ಸೆಗಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಎಂದು ತಿಳಿಸಿ, ಪಾಶ್ವವಾಯು ಕುರಿತು ಎಚ್ಚರಿಕೆಯಿಂದಿರಲು ತಿಳಿಸಿದರು.

ರವಿ ನಂದ್ಯಾಳ ಸ್ವಾಗತಿಸಿದರು. ರೋಣದ ಜಿಲ್ಲಾ ಸಂಯೋಜಕ ಪ್ರವೀಣ ಎಸ್ ನಿರೂಪಿಸಿದರು, ಕ್ಲಿನಿಕಲ್ ಸೈಕೋಲಾಜಿಸ್ಟ್ ರೇವಣಸಿದ್ದಪ್ಪ ವಂದಿಸಿದರು. ಈ ಸಂದರ್ಭದಲ್ಲಿ ಎನ್.ಟಿ.ಸಿ.ಪಿ ಕಾರ್ಯಕ್ರಮದ ಆಪ್ತ ಸಮಾಲೋಚಕರಾದ ರೇಷ್ಮಾ ನದಾಫ್, ಎನ್.ಸಿ.ಡಿ ವಿಭಾಗದ ಹಾಗೂ ಬಿ.ಎಸ್.ಸಿ ನರ್ಸಿಂಗ್ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಬಸ್ ಸಂಚಾರ ಆರಂಭಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶ್ರೀ ಕ್ಷೇತ್ರ ಯಲ್ಲಮ್ಮನಗುಡ್ಡಕ್ಕೆ ಈ ಭಾಗದಿಂದ ಸಾಕಷ್ಟು ಭಕ್ತರು ದರ್ಶನಕ್ಕೆ ತೆರಳುತ್ತಿದ್ದು, ಬಸ್ ಸೌಕರ್ಯ ಕಡಿಮೆ ಇರುವದರಿಂದ ಲಕ್ಷ್ಮೇಶ್ವರ ಬಸ್ ನಿಲ್ದಾಣದಿಂದ ಶ್ರೀ ಕ್ಷೇತ್ರ ಸವದತ್ತಿ ಯಲ್ಲಮ್ಮನ ಗುಡ್ಡಕ್ಕೆ ಹೊಸ ಮಾರ್ಗವಾಗಿ ಬಸ್ ಸಂಚಾರ ಆರಂಭಿಸಬೇಕೆಂದು ತಾಲೂಕಿನ ಗುಡೇನಕಟ್ಟಿ, ಮಂಟೂರ, ಬಂಡಿವಾಡ, ನಾಗರಹಳ್ಳಿ ಗ್ರಾಮಸ್ಥರು ಲಕ್ಷ್ಮೇಶ್ವರ ಘಟಕದ ವ್ಯವಸ್ಥಾಪಕಿ ಸವಿತಾ ಆದಿ ಅವರಿಗೆ ಶುಕ್ರವಾರ ಮನವಿ ಸಲ್ಲಿಸಿದರು.




ಗ್ರಾಮೀಣ ಪ್ರದೇಶಗಳಲ್ಲಿನ ಜನರು ಪ್ರಯಾಣಕ್ಕೆ ಅನೂಕೂಲವಾಗುವಂತೆ ಲಕ್ಷ್ಮೇಶ್ವರ, ರಾಮಗೇರಿ ಪಶುಪತಿಹಾಳ, ಸಂಶಿ, ಶಿರೂರ, ಕುಂದಗೋಳ, ಗುಡೇನಕಟ್ಟಿ, ಬಂಡಿವಾಡ, ಕುಸುಗಲ್, ಬ್ಯಾಹಟ್ಟಿ, ತಿರ್ಲಾಪುರ್, ಅಳಗವಾಡಿ, ಅಂಚಿನ ಹಂಚಿನಾಳ, ಹಿರೆಕುಂಬಿ, ಉಗುರುಗೋಳ ಮಾರ್ಗವಾಗಿ ಸವದತ್ತಿಯ ಯಲ್ಲಮ್ಮನ ಗುಡ್ಡಕ್ಕೆ ಪ್ರತಿದಿನ 2ರಿಂದ 3 ಬಸ್ಸುಗಳನ್ನು ಓಡಿಸಬೇಕೆಂದು ಮನವಿಯಲ್ಲಿ ವಿನಂತಿಸಿದರು.

ಗ್ರಾಮಸ್ಥರಿಂದ ಮನವಿ ಸ್ವೀಕರಿಸಿದ ಘಟಕ ವ್ಯವಸ್ಥಾಪಕಿ ಸವಿತಾ ಆದಿ, ಶೀಘ್ರದಲ್ಲಿಯೇ ನಿಮ್ಮ ಬೇಡಿಕೆಯನ್ನು ಈಡೇರಿಸಿ ಪ್ರಯಾಣಿಕರಿಗೆ ಹಾಗೂ ಯಲ್ಲಮ್ಮನ ಗುಡ್ಡಕ್ಕೆ ಹೋಗುವ ಭಕ್ತಾದಿಗಳಿಗೆ ಅನುಕೂಲಕವಾಗುವಂತೆ ಬಸ್ ಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ಕ್ರಮ ವಹಿಸಲಾಗುವದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ತಿರಕಪ್ಪ ಮಲ್ಲಿಗವಾಡ, ಬಸವರಾಜ ಯೋಗಪ್ಪನವರ, ನೇಮಿನಾಥ ರಘುನವರ, ಭರತೇಶ್ ಮಲ್ಲಿಗವಾಡ, ಚನ್ನಬಸಪ್ಪ ಸಿದ್ದುನವರ, ಶಿವಪ್ಪ ಕಟಗಿ, ಯಮನಪ್ಪ ಮಾದರ, ನಾಗಪ್ಪ ಸಿದ್ದಣ್ಣವರ ಮುಂತಾದವರು ಹಾಜರಿದ್ದರು.

# ಕನ್ನಡ ಜಾಗೃತಿ ಸಮಿತಿಗೆ ಆಯ್ಕೆ; ಅಭಿನಂದನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಪರ ಅಭಿವೃದ್ಧಿ ಕಾರ್ಯಗಳಿಗೆ ಕರ್ನಾಟಕ ಸರ್ಕಾರದಿಂದ ಕನ್ನಡ ಜಾಗೃತಿ ಸಮಿತಿ ಜಿಲ್ಲಾ ಮಟ್ಟದ ಸಮಿತಿಗಳನ್ನು ಆಯ್ಕೆ ಮಾಡಲಾಗಿದೆ.







ಗದಗ ಜಿಲ್ಲೆಯಲ್ಲಿ ಒಟ್ಟು ಐದು ಜನರನ್ನು ಕನ್ನಡ ಜಾಗೃತಿ ಸಮಿತಿಗೆ ಆಯ್ಕೆ ಮಾಡಲಾಗಿದೆ. ಹಿರಿಯರು, ಬಸವ ಅನುಯಾಯಿಗಳು ಹಾಗೂ ನಿವೃತ್ತ ಇಂಜಿನಿಯರರಾದ ಅಶೋಕ ಬರಗುಂಡಿ, ಯುವ ಹೋರಾಟಗಾರ ಮುತ್ತು ಬಿಳೆಯಲಿ, ಪಿ.ಪಿ.ಜಿ ಕಲಾ ಕಾಲೇಜಿನ ಪಾಚಾರ್ಯ ರಾಜಶೇಖರ ದಾನರಡ್ಡಿ, ಸಾಮಾಜಿಕ ಹೋರಾಟಗಾರ ಮುತ್ತಣ್ಣ ಹಾಳಕೇರಿ ಮುಂಡರಗಿ, ಮಹಿಳಾ ಹೋರಾಟಗಾರ್ತಿ ಲಾಡಮಾ ನದಾಫ್ ಗದಗ ಇವರನ್ನು ಆಯ್ಕೆ ಮಾಡಿರುವ ಸರ್ಕಾರಕ್ಕೆ ಹಾಗೂ ಸಮಿತಿಯ ಎಲ್ಲ ಸದಸ್ಯರಿಗೆ ಆನಂದ ಶಿಂಗಾಡಿ ಧನ್ಯವಾದಗಳನ್ನು ಅರ್ಪಿಸಿದ್ದಾರೆ.

ಕನ್ನಡ ಉಳಿವಿಗಾಗಿ, ಕನ್ನಡದ ಅಭಿವೃದ್ಧಿಗಾಗಿ ಸಮಿತಿಯ ಸದಸ್ಯರು ತಮ್ಮ ಸೇವೆಯನ್ನು ಮುಡಿಪಾಗಿಡಲಿ ಎಂದು ಗದಗ ಜಿಲ್ಲಾ ಛಲವಾದಿ ಮಹಾಸಭಾ ಆಶಿಸಿದೆ.

# ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿಗೆ ಸಿದ್ದನಗೌಡರ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪತ್ರಿಕೋದ್ಯಮ ಕ್ಷೇತ್ರದಲ್ಲಿ ಅಪಾರ ಸೇವೆ ಸಲ್ಲಿಸಿದ ಹಿನ್ನೆಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 2025ನೇ ಸಾಲಿನ 70ನೇ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿಗೆ ಮುಳಗುಂದ ಪಟ್ಟಣದ ವಿಜಯ ಕರ್ನಾಟಕ ಪತ್ರಿಕೆಯ ವರದಿಗಾರ ವೀರಪ್ಪ ದೇವಪ್ಪ ಸಿದ್ದನಗೌಡರ ಆಯ್ಕೆಯಾಗಿದ್ದಾರೆ.



ವೀರಪ್ಪ ಸಿದ್ದನಗೌಡರ 2016ರಲ್ಲಿ ಹೊಸ ದಿಗಂತ ಪತ್ರಿಕೆಯಿಂದ ತಮ್ಮ ವೃತ್ತಿಯನ್ನು ಪ್ರಾರಂಭಿಸಿದರು. ಮುಳಗುಂದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ. 1ರ ಎಸ್‌ಡಿಎಂಸಿ ಅಧ್ಯಕ್ಷರಾಗಿ ಶಾಲೆಯ ಸಂಪೂರ್ಣ ಅಭಿವೃದ್ಧಿಯ ಹರಿಕಾರಕಾರಿ, ಪತ್ರಿಕಾ ಧರ್ಮವನ್ನು ಉಸಿರಾಗಿಸಿಕೊಂಡು ತಮ್ಮ ಬರವಣಿಗೆ ಮೂಲಕ ಪಟ್ಟಣ ಸೇರಿದಂತೆ ಸುತ್ತ ಮುತ್ತಲಿನ ಸಾಕಷ್ಟು ಸಮಸ್ಯೆಗಳ ಕುರಿತು ಬೆಳಕು ಚೆಲ್ಲಿದವರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಮುಳಗುಂದ ಘಟಕದ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿದ ಇವರ ಸೇವೆಯನ್ನು ಗುರುತಿಸಿ 2025ನೇ ಸಾಲಿನ ಜಿಲ್ಲಾ ಮಟ್ಟದ ರಾಜ್ಯೋತ್ಸವ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

# ಜನರ ಬೇಡಿಕೆಗನುಸಾರ ಅಭಿವೃದ್ಧಿ ಯೋಜನೆಗಳನ್ನು ತಯಾರಿಸಿ

▶▶ಮೊದಲನೇ ಪುಟದಿಂದ

ಸೂಚನೆಯಿದ್ದು, ನವೆಂಬರ್ 14ರಂದು ಇನ್ನೊಂದು ಸಭೆಯನ್ನು ಕರೆಯಲು ಸಭೆಯಲ್ಲಿ ನಿರ್ಧರಿಸಲಾಯಿತು.

ಸಭೆಯಲ್ಲಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಜಿಲ್ಲಾ ಯೋಜನಾ ಸಮಿತಿ ಸದಸ್ಯರುಗಳಾದ ವಿಜಯಕುಮಾರ ಶಿವಪ್ಪ ನೀಲಗುಂದ, ಬೆಟಗೇರಿ ರಾಜೇಸಾಬ ಮೌಲಾಸಾಬ, ಪರವೀನಬಾಬನು ಅಬ್ದುಲಮುನಾಫ್ ಮುಲ್ಲಾ, ರಾಜೇಶ್ವರಿ ಶಂಕರಗೌಡ ವೀರನಗೌಡ್ರ, ಮಲ್ಲಯ್ಯ ಗುರುಬಸಪ್ಪನಮಠ, ರಾಚಯ್ಯ ಬಸಯ್ಯ ಮಾಲಗಿತ್ತಿಮಠ, ಚಂದ್ರಶೇಖರಗೌಡ ಪರ್ವತಗೌಡ ಕರಿಸೋಮನಗೌಡ, ಕೃಷ್ಣಾ ಪರಾಪೂರ, ದಾಬಲಸಾಬ ಬಾಡಿನ, ಬರಕತ್ ಅಲಿ ಮುಲ್ಲಾ, ಜೈನುಲಾಬ್ಬೀನ ರಹಿಮಾನಸಾಬ ನಮಾಜಿ, ಮಾನ್ವಿ ವಿನಾಯಕ ಶಿವಪ್ಪ, ರಾಜೇಸಾಬ ಅಮೀನಸಾಬ ಸಾಂಗ್ಲಿಕರ್, ವೆಂಕಟೇಶ ಕರಿಯಪ್ಪ ಮುದುಗಲ್ಲ, ಮಾಧೂಸಾ ತೇಜೋಸಾ ಮೇರವಾಡೆ, ಸುರೇಶ ಕಟ್ಟಿಮನಿ, ತಾಲೂಕು ಯೋಜನಾ ಸಮಿತಿ ಸದಸ್ಯರಾದ ವಿಜಯಲಕ್ಷ್ಮೀ ಯಲ್ಲಪ್ಪ ಹೊಸಮನಿ, ರಾಜಶೇಖರ ಮಾಲಗಿತ್ತಿ, ಪ್ರೇಮವ್ವ ಮಾನಪ್ಪ ಲಮಾಣಿ, ಶಿವಲೀಲಾ ದೇವಪ್ಪ ಬಂಡಿಹಾಳ, ಶೋಭಾ ಮುಳ್ಳೂರ, ಬಸಮ್ಮ ಸ್ಥಾವರಮಠ, ವಿಜಯಲಕ್ಷ್ಮೀ ಧರ್ಮಣ್ಣ ಲಮಾಣಿ, ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು, ತಾ.ಪಂ ಕಾರ್ಯನಿರ್ವಹಣಾಧಿಕಾರಿಗಳು ಹಾಜರಿದ್ದರು.

# ಸದೃಢ ರಾಷ್ಟ್ರ ನಿರ್ಮಾಣಕ್ಕೆ ಕೈಜೋಡಿಸಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಕೇಂದ್ರ ಗೃಹ ಸಚಿವಾಲಯವು ಅ.31ನ್ನು ರಾಷ್ಟ್ರೀಯ ಏಕತಾ ದಿನವನ್ನಾಗಿ ಘೋಷಿಸಿದ್ದು, ಇದು ನಮ್ಮ ದೇಶದ ಏಕತೆ, ಸಮಗ್ರತೆ ಮತ್ತು ಭದ್ರತೆಯ ಸಂಕೇತವಾಗಿದೆ ಎಂದು ಶಿರಹಟ್ಟಿಯ ಪಿಎಸ್‌ಐ ಈರಪ್ಪ ರಿತ್ತಿ ಹೇಳಿದರು.

ಅವರು ಶುಕ್ರವಾರ ಶಿರಹಟ್ಟಿಯ ಸರಕಾರಿ ಪದವಿ ಪೂರ್ವ ಕಾಲೇಜು ಹಾಗೂ ಎಫ್.ಎಂ. ಡಬಾಲಿ ಪದವಿ ಪೂರ್ವ ಕಾಲೇಜುಗಳಲ್ಲಿ ಗದಗ ಜಿಲ್ಲಾ ಪೊಲೀಸ್ ವತಿಯಿಂದ ಆಯೋಜಿಸಿದ್ದ ರಾಷ್ಟ್ರೀಯ ಏಕತಾ ದಿನಾಚರಣೆ ಹಾಗೂ ಅಂಗವಾಗಿ ಸರ್ದಾರ್ ವಲ್ಲಭಬಾಯಿ ಪಟೇಲ್ ಅವರ 150ನೇ ಜನ್ಮ ದಿನಾಚರಣೆ ನಿಮಿತ್ತ ಠಾಣೆಯಲ್ಲಿ ಸಸಿ ನೆಟ್ಟು ವಿದ್ಯಾರ್ಥಿಗಳೊಂದಿಗೆ ಮಾತನಾಡಿದರು.

ದೇಶದ ಏಕತೆ, ಸಮಗ್ರತೆ ಮತ್ತು ಭದ್ರತೆಯನ್ನು ಕಾಪಾಡಲು ನಮ್ಮನ್ನು ನಾವು ಸಮರ್ಪಿಸಿಕೊಳ್ಳುವ ದಿನ ಇದಾಗಿದ್ದು, ಸ್ವತಂತ್ರ ಭಾರತದ ಮೊದಲ ಉಪ ಪ್ರಧಾನಿ ಮತ್ತು ಗೃಹ ಸಚಿವರಾಗಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ಅನೇಕ ರಾಜಪ್ರಭುತ್ವ ಸಂಸ್ಥಾನಗಳನ್ನು ಒಟ್ಟುಗೂಡಿಸಿ ಒಂದೇ ಒಕ್ಕೂಟ ವ್ಯವಸ್ಥೆಯನ್ನು ರಚಿಸುವಲ್ಲಿ ನಿರ್ಣಾಯಕ ವ್ಯಕ್ತಿಯಾಗಿ, ಗಣರಾಜ್ಯಕ್ಕೆ ಅಡಿಪಾಯವನ್ನು ಹಾಕಿದ್ದರು. ದೇಶ ವಿಭಜನೆಯ ಸಂದರ್ಭದಲ್ಲಿ ಅವರ ಕಲ್ಪನೆ ಅತ್ಯದ್ಭುತವಾಗಿತ್ತು, ಅವರನ್ನು ಸ್ಮರಿಸುವದಕ್ಕಾಗಿ ಏಕ್ತಾ ನಗರದಲ್ಲಿ 182 ಮೀಟರ್ ಬಳಿ ಏಕತಾ ಪ್ರತಿಮೆಯನ್ನು ಸಹ ನಿರ್ಮಿಸಿ ಗೌರವ ಸಲ್ಲಿಸಲಾಗುತ್ತದೆ. ಬಲಿಷ್ಠ ಮತ್ತು ಸದೃಢ ರಾಷ್ಟ್ರ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕೆಂದು ಹೇಳಿದರು.

ಸರಕಾರಿ ಪ.ಪೂ ಕಾಲೇಜಿನ ಪ್ರಾಚಾರ್ಯ ಬಿ.ಜಿ. ಗಿರಿಮತಮ್ಮಣ್ಣವರ, ಎಫ್.ಎಂ. ಡಬಾಲಿ ಕಾಲೇಜಿನ ಪ್ರಾಚಾರ್ಯ ಎಂ.ಸಿ. ಭಜಂತ್ರಿ, ಉಪನ್ಯಾಸಕರು, ಸಿಬ್ಬಂದಿಗಳು, ಪೊಲೀಸ್ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# RSS ಪಥಸಂಚಲನವನ್ನು ಪ್ರತಿಷ್ಠೆಯಾಗಿ ತೆಗೆದುಕೊಂಡಿದೆ: ಪ್ರಿಯಾಂಕ್ ಖರ್ಗೆ

■ವಿಜಯಸಾಕ್ಷಿ ಸುದ್ದಿ, ಕಲಬುರಗಿ

RSS ಪಥಸಂಚಲನೆ ವಿಚಾರವನ್ನು ಪ್ರತಿಷ್ಠೆಯನ್ನಾಗಿ ತೆಗೆದುಕೊಂಡಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಆರೋಪಿಸಿದ್ದಾರೆ.



ಕಲಬುರಗಿಯ ಐವಾನ್ – ಇ– ಶಾಹಿ ಅತಿಥಿಗೃಹದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅದೇ ದಿನದಂದು, ಅಲ್ಲೇ ಪಥಸಂಚಲಮಾಡುತ್ತೇವೆ ಎಂದು ಆರ್‌ಎಸ್‌ಎಸ್ ಹೇಳಿದೆ. ಈ ಬಗ್ಗೆ ಕೆಲವು ಸಂಘಟನೆಗಳು ಕೂಡಾ ಅದೇ ದಿನ, ತಾವೂ ಸಹ ಅಲ್ಲೇ ಪಥಸಂಚಲನ ಮಾಡುವುದಾಗಿ ಅರ್ಜಿ ಸಲ್ಲಿಸಿವೆ. ಪ್ರಸ್ತುತ ಈ ವಿಚಾರ ಹೈಕೋರ್ಟ್‌ನಲ್ಲಿದೆ. ಈ ವಿಷಯದಲ್ಲಿ ನ್ಯಾಯಾಲಯ ನೀಡುವ ಆದೇಶವನ್ನು ಎಲ್ಲರೂ ಪಾಲಿಸಬೇಕಾಗುತ್ತದೆ' ಎಂದಿದ್ದಾರೆ.

ಖಖಖ ನವರು ಕಲಬುರಗಿ ಸೇರಿದಂತೆ ಎಲ್ಲ ಕಡೆ ಮಾಹಿತಿ ನೀಡಿದ್ದಾರೆ ಹೊರತು ಅನುಮತಿ ಕೇಳಿಲ್ಲ. ಇವರು ಕೇಳಿದ ತಕ್ಷಣ ಭದ್ರತೆ ಕೊಡಲು ಪೊಲೀಸರಿಗೇನು ಕೆಲಸ ಇಲ್ಲವಾ? ಚಿತ್ತಾಪುರದಲ್ಲಿ ಅನುಮತಿ ನಿರಾಕರಿಸಿದ್ದರಿಂದ ಹೈಕೋರ್ಟ್‌ಗೆ ಹೋದರು. ಇತರರು ಕೂಡಾ ನಮಗೂ ಅನುಮತಿ ಕೊಡಿ ಎಂದರು. ನೋಂದಣಿಯಾಗದ ಒಂದು ಸಂಸ್ಥೆಯ ಕಾರ್ಯಕರ್ತರು ಕೈಯಲ್ಲಿ ದೊಣ್ಣೆ ಹಿಡಿದು ಪಥಸಂಚಲನ ಮಾಡಿದರೆ, ಸಾರ್ವಜನಿಕರಿಗೆ ಭೀತಿ ಆಗುವುದಿಲ್ಲವಾ? ಏನಾದರೂ ಹೆಚ್ಚುಕಮ್ಮಿಯಾದರೆ ಯಾರು ಜವಾಬ್ದಾರರು?' ಎಂದು ಪ್ರಶ್ನಿಸಿದರು.

'ಲಾಠಿ ಹಿಡಿಯುವ ವಿಚಾರದಲ್ಲಿ ಎಲ್ಲಾ ಕಡೆ ಏನೂ ತಕರಾರು ಇಲ್ಲ. ಚಿತ್ತಾಪುರದಲ್ಲಿ ಮಾತ್ರವೇ ಯಾಕೆ?' ಎಂಬ ಪ್ರಶ್ನೆಗೆ ಉತ್ತರಿಸಿದ ಸಚಿವರು, 'ಚಿತ್ತಾಪುರದಲ್ಲಿ ಕಾನೂನು ಇದೆ. ಹಾಗೆ ಎಲ್ಲ ಕಡೆಯೂ ಇದೆ. ಆದರೆ ಚಿತ್ತಾಪುರ ಯುವಕರ ಭವಿಷ್ಯತ್ತಿನ ಪ್ರಶ್ನೆ ಬಂದಾಗ ಕಾನೂನು ಪ್ರಕಾರ ಕ್ರಮ ಜರುಗಿಸಲಾಗಿದೆ. ಈಗ ವಿಚಾರ ಹೈಕೋರ್ಟ್‌ನಲ್ಲಿದೆ. ನ್ಯಾಯಾಲಯ ಲಾಠಿ ಹಿಡಿದು ಪಥಸಂಚಲನ ನಡೆಸಲು ಅನುಮತಿ ನೀಡಿದರೆ ನಮ್ಮದೇನು ಅಭ್ಯಂತರವಿಲ್ಲ' ಎಂದು ಉತ್ತರಿಸಿದ್ದಾರೆ.

ಈ ಎಲ್ಲ ಬೆಳವಣಿಗೆ ನಂತರ ತಮ್ಮನ್ನು ಟಾರ್ಗೆಟ್ ಮಾಡಲಾಗುತ್ತಿದೆಯಲ್ಲ ಎಂದು ಕೇಳಿದ ಪ್ರಶ್ನೆಗೆ ಉತ್ತರಿಸಿದ ಪ್ರಿಯಾಂಕ್, 'ಮಾಡಲಿ ಬಿಡಿ. ಪ್ರಶ್ನೆ ಎತ್ತಿದ್ದು ನಾನೇ ತಾನೆ. ಬೇರೆಯವರ ಐಡಿಯಾಲಜಿ ಬಗ್ಗೆ ನಾನು ಹೇಳುವುದಿಲ್ಲ. ನನ್ನ ಐಡಿಯಾಲಜಿ, ಸಿಎಂ ಅವರ ಐಡಿಯಾಲಜಿ, ಖರ್ಗೆ ಸಾಹೇಬರ ಐಡಿಯಾಲಜಿ, ರಾಹುಲ್ ಗಾಂಧಿಯವರ ಐಡಿಯಾಲಜಿ ಸರಿ ಇದೆಯಲ್ಲ, ಅಷ್ಟು ಸಾಕು' ಎಂದರು.

'ಸೇಡಂನಲ್ಲಿ ಕಾನೂನು ಉಲ್ಲಂಘನೆ ಮಾಡಿ ಪಥ ಸಂಚಲನ ಮಾಡಿದ್ದಾರೆ.

## ದೆಹಲಿ ಗಲಭೆಯಲ್ಲಿ ನನ್ನ ವಿರುದ್ಧ ಯಾವುದೇ ಸಾಕ್ಷ್ಯವಿಲ್ಲ..'; ಸುಪ್ರೀಂ ಕೋರ್ಟ್‌ನಲ್ಲಿ ಜಾಮೀನು ಅರ್ಜಿ ಸಲ್ಲಿಸಿದ ಉಮರ್ ಖಾಲಿದ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

2020 ರ ಫೆಬ್ರವರಿಯಲ್ಲಿ ನಡೆದ ದೆಹಲಿ ಗಲಭೆಯಲ್ಲಿ ನಾನು ಭಾಗಿಯಾಗಿರುವುದಕ್ಕೆ ಯಾವುದೇ ಪುರಾವೆಗಳಿಲ್ಲ ಎಂದು ವಿದ್ಯಾರ್ಥಿ ಕಾರ್ಯಕರ್ತ ಉಮರ್ ಖಾಲಿದ್ ಶುಕ್ರವಾರ ಸುಪ್ರೀಂ ಕೋರ್ಟ್‌ಗೆ ತಿಳಿಸಿದರು.

ಕಾನೂನುಬಾಹಿರ ಚಟುವಟಿಕೆಗಳು (ತಡೆಗಟ್ಟುವಿಕೆ) ಕಾಯ್ದೆ (ಯುಎಪಿಎ) ಅಡಿಯಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ಜಾಮೀನು ಕೋರಿರುವ ಖಾಲಿದ್, ತಮ್ಮ ಮೇಲೆ ಸುಳ್ಳು ಆರೋಪ ಹೊರಿಸಲಾಗಿದೆ, ಯಾವುದೇ ಪುರಾವೆಗಳು ನನ್ನನ್ನು ದೆಹಲಿ ಗಲಭೆಯೊಂದಿಗೆ ಸಂಪರ್ಕಿಸುವುದಿಲ್ಲ ಎಂದು ವಾದಿಸಿದರು. ಖಾಲಿದ್ ಅವರನ್ನು ಪ್ರತಿನಿಧಿಸುವ ಹಿರಿಯ ವಕೀಲ ಕಪಿಲ್ ಸಿಬಲ್, ನ್ಯಾಯಮೂರ್ತಿಗಳಾದ ಅರವಿಂದ್ ಕುಮಾರ್ ಮತ್ತು ಎನ್. ವಿ. ಅಂಜಾರಿಯಾ ಅವರ ಪೀಠಕ್ಕೆ ತಮ್ಮ ಕಕ್ಷಿದಾರರ ವಿರುದ್ಧ 'ಆರ್ಥಿಕ, ಶಸ್ತ್ರಾಸ್ತ್ರಗಳು ಅಥವಾ ಯಾವುದೇ ವಸ್ತು ಸಾಕ್ಷ್ಯಗಳನ್ನು ವಶಪಡಿಸಿಕೊಳ್ಳಲಾಗಿಲ್ಲ' ಎಂದು ಹೇಳಿದರು.

# ನಿಧನ

## ಶಿವಮ್ಮ ಅಡ್ರಕಟ್ಟಿ



**ಮುಳಗುಂದ:** ಪಟ್ಟಣ ಸಮೀಪದ ಕುರ್ತಕೋಟಿ ಗ್ರಾಮದ ಶಿವಮ್ಮ ಮಲಕಾಜಪ್ಪ ಅಡ್ರಕಟ್ಟಿ (78) ಶುಕ್ರವಾರ ನಿಧನರಾಗಿದ್ದಾರೆ. ಮೃತರು ಓರ್ವ ಪುತ್ರ, ಐವರು ಪುತ್ರಿಯರು ಹಾಗೂ ಅಪಾರ ಬಂಧು– ಬಳಗ ಅಗಲಿದ್ದಾರೆ.

# ಮಕಾನದಾರರಿಗೆ ಜಿಲ್ಲಾ ರಾಜ್ಯೋತ್ಸವ ಪುರಸ್ಕಾರ

■ವಿಜಯಸಾಕ್ಷಿ ಸುದ್ದಿ, ಗದಗ

ನಿರಂತರ ಪ್ರಕಾಶನದ ಮೂಲಕ ಮೌಲ್ಯಯುತ ಕೃತಿಗಳನ್ನು ಕನ್ನಡ ಸಾರಸ್ವತ ಲೋಕಕ್ಕೆ ಕೊಡುಗೆಯಾಗಿ ನೀಡುವ ಜೊತೆಗೆ ಸಾಹಿತ್ಯ ಸಂಘಟನೆ, ಯುವ ಬರಹಗಾರರಿಗೆ ಉತ್ತೇಜನ ನೀಡುತ್ತಿರುವ ಕರ್ನಾಟಕ ರಾಜ್ಯ ಸರ್ವೋತ್ತಮ ಸೇವಾ ಪುರಸ್ಕೃತ ಹಿರಿಯ ಸಾಹಿತಿ ಎ.ಎಸ್. ಮಕಾನದಾರ ಜಿಲ್ಲಾ ರಾಜ್ಯೋತ್ಸವ ಪುರಸ್ಕಾರಕ್ಕೆ ಭಾಜನರಾಗಿದ್ದಾರೆ.



ಕವಿ ಮಕಾನದಾರ ಅವರ ಮೂರುವರೆ ದಶಕದ ಸಾಹಿತ್ಯ ಸೇವೆಯನ್ನು ಪರಿಗಣಿಸಿ ಗದಗ ಜಿಲ್ಲಾಡಳಿತದ ವತಿಯಿಂದ 70ನೇ ಕರ್ನಾಟಕ ರಾಜ್ಯೋತ್ಸವ ಆಚರಣೆಯ ಸುಸಂದರ್ಭದಲ್ಲಿ ಕಾನೂನು, ಸಂಸದೀಯ ವ್ಯವಹಾರಗಳು, ಪ್ರವಾಸೋದ್ಯಮ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಮತ್ತು ಜಿಲ್ಲೆಯ ಜನ ಪ್ರತಿನಿಧಿಗಳು, ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಸಮ್ಮುಖದಲ್ಲಿ ಗೌರವ ಸಮ್ಮಾನ ಜರುಗಲಿದೆ.

ಮಕಾನದಾರ ಅವರ ಅನೇಕ ಕೃತಿಗಳು ಕೊಂಕಣಿ, ಹಿಂದಿ, ತಮಿಳು, ತೆಲಗು ಬ್ಯಾರಿ, ಮಲೆಯಾಳಿ, ಇಂಗ್ಲಿಷ್, ದೇವನಾಗರಿ ಲಿಪಿ ಭಾಷೆಗಳಿಗೆ ಅನುವಾದಗೊಂಡಿದ್ದು, ಇತ್ತೀಚೆಗೆ ಮಹಾರಾಷ್ಟ್ರ ರಾಜ್ಯದ ಶಿವಾಜಿ ವಿಶ್ವವಿದ್ಯಾಲಯ, ಅಹಲ್ಯಬಾಯಿ ಹೋಳ್ಕರ್ ವಿಶ್ವವಿದ್ಯಾಲಯ, ವಿಜಯ ನಗರ ಶ್ರೀ ಕೃಷ್ಣ ದೇವರಾಯ ವಿಶ್ವವಿದ್ಯಾಲಯ, ಈ ಮೊದಲು ಕುವೆಂಪು ವಿಶ್ವವಿದ್ಯಾನಿಲಯಗಳ ಪಠ್ಯಗಳಲ್ಲಿ ಮಕಾನದಾರರ ಕವಿತೆ, ಗಜಲ್‌ಗಳು ಪಠ್ಯ–ಪುಸ್ತಕಗಳಾಗಿವೆ.

ಸೂಫಿ ಸಾಹಿತ್ಯದ ಮೇರು ಕೃತಿ ವಿಶ್ವ ಭ್ರಾತೃತ್ವದ ಸೂಫಿ ದೂದ್ ಪೀರಾ, ಅಕ್ಕಡಿ ಸಾಲು, ಪ್ಯಾರಿ ಪದ್ಯ, ಮುತ್ತಿನ ತೆನೆ ಮುಂತಾದ ಮಹತ್ವದ ಸಂಕಲನಗಳು ವಿಶ್ವದ ಪ್ರತಿಷ್ಠಿತ ಗ್ರಂಥಾಲಯವಾದ ಅಮೇರಿಕಾದ ಕಾಂಗ್ರೆಸ್ ಆಫ್ ಲೈಬ್ರರಿಯ ವೆಬ್ ಲಿಂಕ್‌ನಲ್ಲಿ ಅಳವಡಿಸಿದ್ದನ್ನು ಇಲ್ಲಿ ಸ್ಮರಿಸಬಹುದು.

### ನರೇಗಲ್ಲದ ಕೋಚಲಾಪೂರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿದೆ ಕನ್ನಡ ಭಾಷಾ ಪ್ರಯೋಗ ಶಾಲೆ

# ಮಕ್ಕಳ ಕನಸುಗಳಿಗೆ ಬೆಳಕಾಗುತ್ತಿರುವ ನೂತನ ಚಳವಳಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪ್ರಸ್ತುತ ದಿನಮಾನಗಳಲ್ಲಿ ಕನ್ನಡದ ಸ್ಥಿತಿ ಪಟ್ಟಣ, ನಗರ, ಮಹಾನಗರಗಳಲ್ಲಿ ಅಲ್ಲದೇ ಉದ್ಯೋಗ ಕ್ಷೇತ್ರದಲ್ಲಿಯೂ ದುರ್ಬಲವಾಗಿದೆ. ಇಂಗ್ಲಿಷ್ ಮಾಧ್ಯಮದ ಅಬ್ಬರ, ಪೋಷಕರ ಒತ್ತಡ ಮತ್ತು ಪಠ್ಯಕ್ರಮದ ಬದಲಾವಣೆಯ ನಡುವೆ ಕನ್ನಡ ವಿಷಯ ಕೇವಲ ಒಂದು ಪೇಪರ್ ಆಗಿ ಉಳಿದಿದೆ. ವಿದ್ಯಾರ್ಥಿಗಳು ಕನ್ನಡ ಓದಿದರೂ ಕನ್ನಡದಲ್ಲಿ ಮಾತನಾಡುವುದಿಲ್ಲ. ಆದರೆ, ಇಲ್ಲೊಂದು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ರಾಜ್ಯದಾದ್ಯಂತ ಗಮನ ಸೆಳೆದಿದೆ. ಇಲ್ಲಿ ಪ್ರತಿದಿನ ಕನ್ನಡ ರಾಜೋತ್ಸವದಂತೆಯೇ ಉತ್ಸವದ ವಾತಾವರಣ ತುಂಬಿರುತ್ತದೆ.

> ಕನ್ನಡದ ನುಡಿ, ನುಡಿಗಟ್ಟು, ಜನಪದ ಗೀತೆ ಮತ್ತು ಕಥೆಗಳು ನಾಶವಾಗುತ್ತಿರುವ ಸಂದರ್ಭದಲ್ಲಿ ಈ ಪ್ರಯೋಗ ಶಾಲೆ ಆಶಾಕಿರಣವಾಗಿದೆ. ಮಕ್ಕಳು ತಮ್ಮ ಭಾಷೆಯ ಗೌರವವನ್ನು ಅರಿತು, ಕನ್ನಡದಲ್ಲಿ ನವೋತ್ಸಾಹದಿಂದ ಮಾತನಾಡುತ್ತಿರುವುದು ಸಾಕ್ಷಾತ್ ವಿಜಯಕುಮಾರರ ಪ್ರಯತ್ನದ ಫಲ.
>
> **– ಅರ್ಜುನ ಕಾಂಬೋಜಿ.**
> ಕ್ಷೇತ್ರ ಶಿಕ್ಷಣಾಧಿಕಾರಿ, ರೋಣ.

ಇದು ಗದಗ ಜಿಲ್ಲೆಯ ಗಜೇಂದ್ರಗಡ ತಾಲೂಕಿನ ನರೇಗಲ್ಲ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ವಾರ್ಡ್ ನಂ. 1ರ ಕೋಚಲಾಪೂರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕನ್ನಡ ಭಾಷೆಯ ಸೊಗಸು ಮತ್ತು ಸಾಹಿತ್ಯದ ವೈಭವವನ್ನು ಹೊಸ ತಲೆಮಾರಿಗೆ ಪರಿಚಯಿಸಲು ಈ ಹಳ್ಳಿಯೊಂದರಲ್ಲಿ ಆರಂಭವಾದ ಕನ್ನಡ ಭಾಷಾ ಪ್ರಯೋಗ ಈಗ ಎಲ್ಲರ ಕಣ್ಣು, ಮನ ಸೆಳೆಯುತ್ತಿದೆ. ಈ ಪ್ರಯೋಗಶಾಲೆಯ ಹೃದಯಭಾಗದಲ್ಲಿ ನಿಂತಿದ್ದಾರೆ ಶಿಕ್ಷಕ ವಿಜಯಕುಮಾರ ಡಿ.ಆರ್. ಕನ್ನಡದ ಮೇಲಿನ ಅಭಿಮಾನದಿಂದ ಅವರ ಕನಸೆಂದರೆ, ಕನ್ನಡ ಕಲಿಯಬೇಕು, ಕನ್ನಡ ಮಾತನಾಡಬೇಕು, ಕನ್ನಡದಲ್ಲಿ ಯೋಚಿಸಬೇಕು. ಅವರು ಮಕ್ಕಳಲ್ಲಿ ಭಾಷಾ ಪ್ರೀತಿ ಬೆಳೆಸಲು ರೂಪಿಸಿರುವ ಪ್ರಯೋಗಗಳು, ಚಟುವಟಿಕೆಗಳು ಮತ್ತು ಪಾಠ ವಿಧಾನಗಳು ವಿಶಿಷ್ಟ.

> ಈ ವಿಶಿಷ್ಟ ಪ್ರಯೋಗ ಶಾಲೆಯ ಹೃದಯ ಶಿಕ್ಷಕ ವಿಜಯಕುಮಾರ ಡಿ.ಆರ್. ತಮ್ಮ ವೈಯಕ್ತಿಕ ಆಸಕ್ತಿ, ಶ್ರಮ ಮತ್ತು ಕನ್ನಡದ ಮೇಲಿನ ಅಪ್ರಮೇಯ ಅಭಿಮಾನದಿಂದ ಈ ಶಾಲೆಯನ್ನು ಸಂಪೂರ್ಣವಾಗಿ ಕನ್ನಡದ ವಾತಾವರಣಕ್ಕೆ ತಂದಿದ್ದಾರೆ. ಅವರು ಹೇಳುವಂತೆ, ಕನ್ನಡ ಕಲಿಯುವುದು ಕೇವಲ ಪಾಠವಲ್ಲ, ಅದು ಬದುಕಿನ ಪಾಠ. ವ್ಯಾಕರಣ ಚಾರ್ಟ್‌ಗಳು, ಪದ್ಯಮಾಲೆಗಳು, ನುಡಿಗಟ್ಟು ಪಟಗಳು, ಭಾಷಾ ಆಟಗಳು, ಕವಿತೆಗಳ ಹೂಗುಚ್ಛಗಳು, ಹಿರಿಯ ಕನ್ನಡ ಚಿಂತಕರ ಉಲ್ಲೇಖಗಳು ಎಲ್ಲವೂ ಮಕ್ಕಳಲ್ಲಿ ಕನ್ನಡದ ಆಸಕ್ತಿ ಹುಟ್ಟಿಸುತ್ತಿವೆ.
>
> **– ಆರ್.ಎಸ್. ಬುರಡಿ.**
> ಉಪ ನಿರ್ದೇಶಕರು, ಶಿಕ್ಷಣ ಇಲಾಖೆ.

ಭಾಷಾ ಪ್ರಯೋಗ ಶಾಲೆಯ ಗೋಡೆಗಳು ಚಿತ್ರಗಳ, ಮಾತುಗಳ, ಕನ್ನಡದ ಕಾವ್ಯದ ಚಿತ್ತಾರಗಳಿಂದ ತುಂಬಿವೆ. ಇಲ್ಲಿ ಪದಗಳು ಕೇವಲ ಶಬ್ದವಲ್ಲ, ಸಂಸ್ಕೃತಿಯ ನಾಡಿಯಂತಿವೆ. ಮಕ್ಕಳು ಇಲ್ಲಿ ಕಲಿಯುವುದಿಲ್ಲ, ಕನ್ನಡದ ಅಕ್ಷರಗಳ ಜೊತೆ ಬದುಕುತ್ತಾರೆ. ಕನ್ನಡ ಪ್ರಯೋಗಶಾಲೆ ಕೇವಲ ಶಿಕ್ಷಣದ ಕೇಂದ್ರವಲ್ಲ, ಅದು ನಮ್ಮ ನಾಡು-ನುಡಿ, ನಾಡಿನ ನಾಳೆಯ ಕನಸನ್ನು ಕಟ್ಟುತ್ತಿರುವ ಹೊಸ ಚಳವಳಿ. ಅದಕ್ಕೆ ಕಾರಣ ಈ ಪ್ರಯೋಗಶಾಲೆ, ಅದರ ಕನಸುಗಾರ ವಿಜಯಕುಮಾರ ಡಿ.ಆರ್ ಮತ್ತು ಅವರ ಜೀವಸ್ಫೂರ್ತಿ.



> ಪ್ರತಿ ಮಗುವೂ ಇಂಗ್ಲಿಷ್ ಕಲಿಯಲಿ. ಆದರೆ, ಕನ್ನಡ ಬಿಟ್ಟು ಹೋಗಬಾರದು. ಅವರ ಈ ಮಾತು ಮಕ್ಕಳು, ಪೋಷಕರು ಮತ್ತು ಗ್ರಾಮಸ್ಥರಲ್ಲಿ ಹೊಸ ಚೈತನ್ಯ ಮೂಡಿಸಿದೆ. ಆದರೆ, ಇಂತಹ ಪ್ರಯತ್ನಗಳು ಮುಂದುವರಿಯಲು ಸರ್ಕಾರದ ಪ್ರೋತ್ಸಾಹ ಅಗತ್ಯ. ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಶಿಕ್ಷಣ ಇಲಾಖೆ, ಹಾಗೂ ಸ್ಥಳೀಯ ಸಂಸ್ಥೆಗಳು ಇಂತಹ ಪ್ರಯೋಗಶಾಲೆಗಳಿಗೆ ಆರ್ಥಿಕ ಮತ್ತು ತಾಂತ್ರಿಕ ನೆರವು ನೀಡಿದರೆ ರಾಜ್ಯದ ಪ್ರತಿಯೊಂದು ಹಳ್ಳಿಯಲ್ಲಿಯೂ ಇಂತಹ ಕನ್ನಡದ ಮಂದಿರಗಳು ಮೂಡಬಹುದು. ಈ ಪ್ರಯೋಗ ಶಾಲೆ ನಿರ್ಮಾಣಕ್ಕೆ ಶಾಲೆಯ ಮುಖ್ಯ ಶಿಕ್ಷಕಿ ಎಸ್.ಬಿ. ಕೊಟ್ರಶೆಟ್ಟಿ ಸಾಕಷ್ಟು ಪ್ರೋತ್ಸಾಹ ನೀಡಿದ್ದಾರೆ.
>
> **– ವಿಜಯಕುಮಾರ ಡಿ.ಆರ್.**
> ಶಿಕ್ಷಕ, ಸ.ಹಿ.ಪ್ರಾ ಶಾಲೆ ಕೋಚಲಾಪೂರ.

ಸರ್ಕಾರದ ಕನ್ನಡ ಪ್ರೋತ್ಸಾಹ ಕಾರ್ಯಕ್ರಮಗಳು ಕೇವಲ ರಾಜೋತ್ಸವದ ದಿನಕ್ಕೆ ಸೀಮಿತ. ಆದರೆ, ವಿಜಯಕುಮಾರರಂತಹ ಶಿಕ್ಷಕರು ತಮ್ಮ ಮಟ್ಟಿಗೆ ಕನ್ನಡಕ್ಕೆ ಜೀವ ತುಂಬುತ್ತಿದ್ದಾರೆ. ಸರ್ಕಾರ ಇಂತಹ ಪ್ರಯೋಗಶಾಲೆಗಳನ್ನು ಮಾದರಿಯಾಗಿ ಪರಿಗಣಿಸಿ, ರಾಜ್ಯದಾದ್ಯಂತ ಇಂತಹ ಪಾಠಮನೆಗಳ ಸ್ಥಾಪನೆಗೆ ಪ್ರೋತ್ಸಾಹ ನೀಡಬೇಕಾಗಿದ್ದು ಸರ್ಕಾರದ ಹೊಣೆಯಾಗಿದೆ.

ಶಾಲೆಯಲ್ಲಿ ಜ್ಞಾನಪೀಠ ಪ್ರಶಸ್ತಿ ಪಡೆದ ಕನ್ನಡ ಸಾಹಿತಿಗಳ ಫೋಟೋಗಳು ಮತ್ತು ಅವರ ಪುಸ್ತಕ ಸಂಗ್ರಹವೂ ವಿಶೇಷವಾಗಿ ಅಲಂಕರಿಸಲ್ಪಟ್ಟಿವೆ. ಕುವೆಂಪು, ಬೇಂದ್ರೆ, ಗಿರೀಶ ಕಾರ್ನಾಡ್, ಚಂದ್ರಶೇಖರ ಕಂಬಾರ, ಯು. ಆರ್. ಅನಂತಮೂರ್ತಿ ಮುಂತಾದ ಪ್ರಸಿದ್ಧ ಸಾಹಿತಿಗಳ ಪುಸ್ತಕಗಳು ಶಾಲೆಯ 'ಕನ್ನಡ ಗ್ರಂಥಾಲಯ' ಭಾಗದಲ್ಲಿ ಸಂಗ್ರಹವಾಗಿವೆ.

---

### ಮಹರ್ಷಿ ವಾಲ್ಮೀಕಿ ನಾಯಕ ವಿವಿಧೋದ್ದೇಶಗಳ ಸಂಘದ ತಾಲೂಕಾಧ್ಯಕ್ಷ ಭೀಮಣ್ಣ ಯಂಗಾಡಿ ಮಾಹಿತಿ

# ಮಹರ್ಷಿ ವಾಲ್ಮೀಕಿ ಜಯಂತಿ ನ.3ಕ್ಕೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸೋಮೇಶ್ವರ ತೇರಿನ ಆವರಣದಲ್ಲಿ ನವೆಂಬರ್ 3ರಂದು ಬೆಳಿಗ್ಗೆ 10ಕ್ಕೆ ತಾಲೂಕು ಮಟ್ಟದ ಮಹರ್ಷಿ ವಾಲ್ಮೀಕಿ ಹಾಗೂ ವೀರ ಮದಕರಿ ನಾಯಕರ ಜಯಂತ್ಯುತ್ಸವ ಕಾರ್ಯಕ್ರಮ ನಡೆಯಲಿದೆ ಎಂದು ಮಹರ್ಷಿ ವಾಲ್ಮೀಕಿ ನಾಯಕ ವಿವಿಧೋದ್ದೇಶಗಳ ಸಂಘದ ತಾಲೂಕು ಘಟಕದ ಅಧ್ಯಕ್ಷ ಭೀಮಣ್ಣ ಯಂಗಾಡಿ ಮಾಹಿತಿ ನೀಡಿದರು.

ಈ ಕುರಿತು ಶುಕ್ರವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಮಾಹಿತಿ ನೀಡಿದರು.

ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ವಿಜಯ ಕರಡಿ ಮಾತನಾಡಿ, ಈ ಬಾರಿ ತಾಲೂಕಿನಲ್ಲಿ ವಾಲ್ಮೀಕಿ ಮತ್ತು ವೀರ ಮದಕರಿ ನಾಯಕ ಜಯಂತ್ಯುತ್ಸವವನ್ನು ಅದ್ದೂರಿಯಾಗಿ ಆಚರಿಸುತ್ತಿದ್ದೇವೆ. ರಾಜನಹಳ್ಳಿ ಮಹರ್ಷಿ ವಾಲ್ಮೀಕಿ ಗುರುಪೀಠದ ಜಗದ್ಗುರು ಡಾ. ಪ್ರಸನ್ನಾನಂದಪುರಿ ಸ್ವಾಮೀಜಿ ಹಾಗೂ ಚಿತ್ರದುರ್ಗದ ಶಿವಶರಣ ಮಾದಾರ ಚನ್ನಯ್ಯ ಗುರುಪೀಠದ ಡಾ. ಬಸವಮೂರ್ತಿ ಮಾದಾರಚನ್ನಯ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಿಕೊಳ್ಳುವರು. ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು. ಸಂಸದ ಬಸವರಾಜ ಬೊಮ್ಮಾಯಿ ಮಹರ್ಷಿ ವಾಲ್ಮೀಕಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವರು. ಶಾಸಕ ಡಾ. ಚಂದ್ರು ಲಮಾಣಿ, ಸಂಘದ ಅಧ್ಯಕ್ಷ ಭೀಮಣ್ಣ ಯಂಗಾಡಿ ಅಧ್ಯಕ್ಷತೆ ವಹಿಸಿಕೊಳ್ಳುವರು ಎಂದು ತಿಳಿಸಿದರು.

ಸಂಘದ ಯುವ ಮುಖಂಡ ಪ್ರಕಾಶ ಬೆಂತೂರ ಮಾತನಾಡಿ, ಮಾಜಿ ಸಚಿವ ಬಿ. ಶ್ರೀರಾಮುಲು ಅವರು ವಾಲ್ಮೀಕಿ ಮತ್ತು ವೀರ ಮದಕರಿ ನಾಯಕರ ಭಾವಚಿತ್ರಗಳ ಮೆರವಣಿಗೆಗೆ ಚಾಲನೆ ನೀಡುವರು. ಮೆರವಣಿಗೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಗಮಿಸುವ ಕಲಾವಿದರಿಂದ ಕಲಾ ಪ್ರದರ್ಶನ ನಡೆಯುವುದು. ನೂರಾರು ಮಹಿಳೆಯರ ಪೂರ್ಣ ಕುಂಭದೊಂದಿಗೆ ಮೆರವಣಿಗೆ ನಡೆಯುವುದು. ತೇರಿನ ಮನೆಯಿಂದ ಆರಂಭವಾಗುವ ಮೆರವಣಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದೆ ಎಂದು ತಿಳಿಸಿದರು.

ಸಭೆಯಲ್ಲಿ ಸಂಘದ ಕಾರ್ಯದರ್ಶಿ ಹನಮಂತ ಜಾಲಿಮರದ, ಉಪಾಧ್ಯಕ್ಷ ರಾಜು ಓಲೆಕಾರ, ನಾಗರಾಜ ಹಾವಳಕೇರಿ, ಸುರೇಶ ಹಾವನೂರ, ಚಂದ್ರು ತಳವಾರ, ರಾಮಣ್ಣ ಕಲಕೋಟಿ, ಕೆ.ಓ. ಹೂಲಿಕಟ್ಟಿ, ಕಲ್ಲಪ್ಪ ಗಂಗಣ್ಣವರ, ಬಸವರಾಜ ದೊಡ್ಡಮನಿ ಮತ್ತಿತರರು ಇದ್ದರು. ಇದೇ ಸಂದರ್ಭದಲ್ಲಿ ಸಮಾರಂಭದ ಪ್ರಚಾರ ಪತ್ರಿಕೆಗಳನ್ನು ಬಿಡುಗಡೆ ಮಾಡಲಾಯಿತು.

> ಸಮಾಜದ ಮುಖಂಡ ಎನ್.ಎನ್. ನೆಗಳೂರ ಮಾತನಾಡಿ, ಕಾರ್ಮಿಕ ಸಚಿವ ಸಂತೋಷ ಲಾಡ್, ಚಿತ್ರನಟ ಕಿಚ್ಚ ಸುದೀಪ್ ಸೇರಿದಂತೆ ಶಾಸಕರು, ಮಾಜಿ ಶಾಸಕರು, ರಾಜಕೀಯ ಮುಖಂಡರು ಸಮಾರಂಭಕ್ಕೆ ಆಗಮಿಸುವರು. ಡಾ. ಪ್ರಭುರಾಜ ಕೆ.ಎನ್ ಅವರು ಉಪನ್ಯಾಸ ನೀಡುವರು. ವಾಲ್ಮೀಕಿ ನಾಯಕ ಸಮಾಜದವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕು ಎಂದು ಮನವಿ ಮಾಡಿದರು.

---



**ಗದಗ:** ರಾಷ್ಟ್ರೀಯ ಏಕತಾ ದಿವಸದ ಅಂಗವಾಗಿ ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ರಾಷ್ಟ್ರದ ಐಕ್ಯತೆ, ಸಮಗ್ರತೆ , ಭದ್ರತೆಯನ್ನು ಕಾಪಾಡುವ ಪ್ರತಿಜ್ಞಾ ವಿಧಿಯನ್ನು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ಬೋಧಿಸಿದರು. ಈ ಸಂದರ್ಭದಲ್ಲಿ ಭೂ ದಾಖಲೆ ಇಲಾಖೆ ಉಪ ನಿರ್ದೇಶಕ ಜಿ.ಜೆ, ರುದ್ರಣ್ಣಗೌಡ, ಕಂದಾಯ ಇಲಾಖೆಯ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

---

# ಹದಗೆಟ್ಟ ರಸ್ತೆ: ವಾಹನ ತಡೆದು ಆಕ್ರೋಶ




■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಬಸಾಪೂರ ಕ್ರಾಸ್‌ನಿಂದ ಸೊರಟೂರ ಸಂಪರ್ಕಿಸುವ ಗ್ರಾಮೀಣ ಸಂಪರ್ಕ ರಸ್ತೆಯಲ್ಲಿ ಸೆರೆಂಟಿಕಾ ವಿಂಡ್ ಪಾವರ್ ಕಂಪನಿಯ ಟಿಪ್ಪರ್ ಸೇರಿದಂತೆ ಭಾರೀ ಗಾತ್ರದ ವಾಹನಗಳು ಓವರ್ ಲೋಡ್ ತುಂಬಿಕೊಂಡು ಸಂಚರಿಸುವುದರಿಂದ ರಸ್ತೆ ಡಾಂಬರ್ ಕಿತ್ತು ಹದಗೆಟ್ಟು ಹೋಗಿದ್ದು, ರೈತರು ಟಿಪ್ಪರ್ ಸೇರಿದಂತೆ ಸೆರೆಂಟಿಕಾ ವಿಂಡ್ ಪಾವರ್ ಕಂಪನಿಯ ಕಾಂಕ್ರೀಟ್ ಮಿಕ್ಸರ್ ವಾಹನಗಳನ್ನು ತಡೆದು ಚಾಲಕರನ್ನು ತರಾಟೆಗೆ ತೆಗೆದು-ಕೊಂಡ ಘಟನೆ ಶನಿವಾರ ನಡೆದಿದೆ.

ಈ ಮಾರ್ಗದ ಅಕ್ಕ-ಪಕ್ಕದ ಜಮೀನುಗಳಲ್ಲಿ ಪವನ ವಿದ್ಯುತ್ ಫ್ಯಾನ್ ಅಳವಡಿಸಲು ಪವನ ವಿದ್ಯುತ್ ಕಂಪನಿಯ ಭಾರೀ ಗಾತ್ರದ ವಾಹನಗಳು ಹಗಲು ರಾತ್ರಿಯೆನ್ನದೇ ಸಂಚರಿಸಿದ್ದರಿಂದ ರಸ್ತೆಗೆ ಹಾಕಿದ ಡಾಂಬರ್ ಕಿತ್ತು ಹೋಗಿ, ತಗ್ಗು-ಗುಂಡಿಗಳು ಬಿದ್ದು ರಸ್ತೆಯುದ್ದಕ್ಕೂ ರಸ್ತೆಗೆ ಹಾಕಿದ್ದ ಸಣ್ಣ ಗಾತ್ರದ ಜಲ್ಲಿಕಲ್ಲುಗಳು(ಖಡಿ) ಹರಡಿಕೊಂಡಿದೆ. ಎತ್ತು, ದನಕರುಗಳು ಈ ಮಾರ್ಗದಲ್ಲಿ ನಡೆದುಕೊಂಡು ಹೋಗಲಾರದ ಸ್ಥಿತಿ ನಿರ್ಮಾಣವಾಗಿದೆ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು.

ರೈತರ ಮಾತಿಗೆ ಕಿವಿಗೊಡದ ಪವನ ವಿದ್ಯುತ್ ಕಂಪನಿಯ ವಾಹನಗಳು ಹಗಲು-ರಾತ್ರಿ ಎನ್ನದೇ ಸಂಚರಿಸುವುದನ್ನು ಕಂಡ ರೈತರು ವಾಹನಗಳನ್ನು ತಡೆದು ಕೆಲ ಕಾಲ ಪ್ರತಿಭಟಿಸಿ, ಈ ಮಾರ್ಗದಲ್ಲಿ ಭಾರೀ ಗಾತ್ರದ ವಾಹನಗಳು ಸಂಚರಿಸಲು ನಾವು ಅವಕಾಶ ಕೊಡುವುದಿಲ್ಲ ಎಂದು ಪಟ್ಟು ಹಿಡಿದರು. ಕಿತ್ತು ಹೋದ ರಸ್ತೆ ರಿಪೇರಿ ಮಾಡಿಕೊಡಬೇಕು. ಇಲ್ಲವಾದಲ್ಲಿ ನಿಮ್ಮ ವಿರುದ್ಧ ಹೋರಾಟಕ್ಕಿಳಿಯುತ್ತೇವೆ ಎಂದು ಎಚ್ಚರಿಸಿದರು.

ಈ ವೇಳೆ ರೈತರಾದ ಬಸವರಾಜ ಕರಿಗಾರ, ದೇವಪ್ಪ ಅಣ್ಣಿಗೇರಿ, ಮಹ್ಮದಅಲಿ ಶೇಖ, ಮಹಾಂತೇಶ ವೆಂಕಟಾಪೂರ, ಶೇಖಪ್ಪ ಸಂಗನಪೇಟಿ, ಮರಿಯಪ್ಪ ಕಪ್ಪತನವರ, ಮಹಾಂತೇಶ ಹೊಸಕಟ್ಟಿ, ಕಿರಣ ಕುಲಕರ್ಣಿ, ಮಂಜುನಾಥ ಬಾರಕೇರ, ಮುತ್ತಣ್ಣ ಲಾಳಿ, ದೇವರಾಜ ಸಂಗನಪೇಟಿ, ಗಂಗಪ್ಪ ಹೊರಪೇಟಿ, ಉಮ್ಮಣ್ಣ ಕರಿಗೂಳಪ್ಪನವರ ಮುಂತಾದವರಿದ್ದರು.

---

# ಸಾಹಿತಿ ಡಾ. ರಾಜೇಂದ್ರ ಗಡಾದರಿಗೆ ವಿಶ್ವೇಶ್ವರಯ್ಯ ಅಂತಾರಾಷ್ಟ್ರೀಯ ಪ್ರಶಸ್ತಿ ಪ್ರದಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿಯ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್, ವಚನ ಸಾಹಿತ್ಯ ಪರಿಷತ್ ಅಧ್ಯಕ್ಷ, ಮಕ್ಕಳ ಸಾಹಿತಿ, ಸಂಶೋಧಕ, ಕವಿ, ಹಿರಿಯ ಲೇಖಕ ಡಾ. ರಾಜೇಂದ್ರ ಎಸ್. ಗಡಾದ ಅವರಿಗೆ ಬೆಂಗಳೂರಿನ ಭಾರತ ರತ್ನ ಸರ್ ಎಂ. ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಪ್ರತಿಷ್ಠಾನ ಟ್ರಸ್ಟ್ ನೀಡುವ 2025ನೇ ಸಾಲಿನ ಪ್ರತಿಷ್ಠಿತ ವಿಶ್ವೇಶ್ವರಯ್ಯ ಅಂತಾರಾಷ್ಟ್ರೀಯ ಪ್ರಶಸ್ತಿ ಸಂದಿದೆ.

ಇತ್ತೀಚೆಗೆ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಕವಿ, ಸಾಹಿತಿ ಡಾ. ಸಿ. ಸೋಮಶೇಖರ್ ಅವರ ಸರ್ವಾಧ್ಯಕ್ಷತೆಯಲ್ಲಿ ಜರುಗಿದ ಅಖಿಲ ಭಾರತ ಕನ್ನಡ ಕವಿಗಳ ಪ್ರಥಮ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಸಾಹಿತಿ ಡಾ. ರಾಜೇಂದ್ರ ಗಡಾದರಿಗೆ ಸುಪ್ರೀಂ ಕೋರ್ಟಿನ ನಿವೃತ್ತ ಮುಖ್ಯ ನ್ಯಾಯಮೂರ್ತಿಗಳು, ಮಾಜಿ ಲೋಕಾಯುಕ್ತ ಡಾ. ಎನ್. ಸಂತೋಷ್ ಹೆಗಡೆಯವರು ಪ್ರಶಸ್ತಿ ಪ್ರದಾನ ಮಾಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲ ಸೌಕರ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಸ್.ಸಿ. ನಂಜಯ್ಯನಮಠ, ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಡಾ. ಎಂ.ಎಸ್. ಮುತ್ತುರಾಜ್, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಸಿ. ಸೋಮಶೇಖರ್, ಹಿರಿಯ ಚಲನಚಿತ್ರ ಕಲಾವಿದರಾದ ಶಂಕರ್ ಭಟ್, ಗಣೇಶರಾವ್ ಕೇಸರ್‌ಕರ್, ಮೀನಾ, ಅಥಣಿ ಮೋಟಗಿಮಠದ ಡಾ. ಪ್ರಭುಚನ್ನಬಸವ ಮಹಾಸ್ವಾಮಿಗಳು, ಚಪ್ಪಲಕಟ್ಟಿ ಹಿರೇಮಠದ ಡಾ. ಕಲ್ಮೇಶ್ವರ ಮಹಾಸ್ವಾಮಿಗಳು, ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಪ್ರತಿಷ್ಠಾನದ ಅಧ್ಯಕ್ಷ, ಪತ್ರಕರ್ತ, ಚಲನಚಿತ್ರ ನಿರ್ದೇಶಕ ರಮೇಶ್ ಸುರ್ವೆ ಹಾಜರಿದ್ದರು.

ಪ್ರಶಸ್ತಿಗೆ ಭಾಜನರಾದ ಡಾ. ರಾಜೇಂದ್ರ ಗಡಾದರನ್ನು ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತು, ಜಿಲ್ಲಾ ವಚನ ಸಾಹಿತ್ಯ ಹಾಗೂ ಸಾಂಸ್ಕೃತಿಕ ಪರಿಷತ್ತು, ಜಿಲ್ಲಾ ಸಿರಿಗನ್ನಡ ವೇದಿಕೆ, ಜಿಲ್ಲಾ ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತು, ಅಡವೀಂದ್ರ ಸ್ವಾಮಿಮಠದ ಶಿವಾನುಭವ ಸಮಿತಿ, ಕನ್ನಡ ಜಾಗೃತಿ ವೇದಿಕೆ, ಸಂಗಮ ಪ್ರಕಾಶನ ವೇದಿಕೆ ಮುಂತಾದ ಸಂಘಟನೆಗಳು ಅಭಿನಂದಿಸಿವೆ.

---

# 'ಕನ್ನಡ ಎನೆ ಕುಣಿದಾಡುವುದೆನ್ನೆದೆ' ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ನಮ್ಮ-ನಿಮ್ಮ ವೇದಿಕೆಯಿಂದ ಎಸ್.ಬಿ. ಮುಳ್ಳಳ್ಳಿ ಬಿಲ್ಡಿಂಗ್‌ನಲ್ಲಿ ರಾಜ್ಯೋತ್ಸವದ ಅಂಗವಾಗಿ ನವೆಂಬರ್ 1ರಂದು ಹಿರಿಯ ಸಾಹಿತಿಗಳಾದ ಲಲಿತಾ ಕೆರಿಮನಿ ಅಧ್ಯಕ್ಷತೆಯಲ್ಲಿ 'ಕನ್ನಡ ಎನೆ ಕುಣಿದಾಡುವುದೆನ್ನೆದೆ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಯುವ ಬರಹಗಾರರಾದ ರೇಖಾ ಎಸ್.ವಡಕಣ್ಣವರ ಉಪನ್ಯಾಸ ನೀಡುವರು. ಅತಿಥಿಗಳಾಗಿ ತಾಲೂಕಾ ಕದಳಿ ವೇದಿಕೆ ಅಧ್ಯಕ್ಷೆ ನಿರ್ಮಲಾ ಜಿ.ಅರಳಿ, ಸಾಹಿತಿ ಬಸವರಾಜ ಬಾಳೇಶ್ವರಮಠ ಸೇರಿದಂತೆ ಸಾಹಿತಿಗಳು ಪಾಲ್ಗೊಳ್ಳುವರು ಎಂದು ವೇದಿಕೆಯ ಸಂಚಾಲಕ ಡಾ. ಮಂಜುನಾಥ ಬಮ್ಮನಕಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

# ವಿಚಾರ ಸಂಕಿರಣ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದಿಂದ 'ಭಾರತದ ಅಭಿವೃದ್ಧಿ ಪಥದಲ್ಲಿ ಮಹಿಳಾ ಉದ್ಯಮಿಗಳ ಪಾತ್ರ' ಕುರಿತು ವಿಚಾರ ಸಂಕಿರಣವನ್ನು ಸಂಸ್ಥೆಯ ಬನಪ್ಪ ಸಂಕಪ್ಪ ಸಂಕಣ್ಣವರ ಸಭಾ ಭವನದಲ್ಲಿ ನ.1ರಂದು ಸಾಯಂಕಾಲ 5 ಗಂಟೆಗೆ ಏರ್ಪಡಿಸಲಾಗಿದೆ.

ಅತಿಥಿ ಉಪನ್ಯಾಸಕರಾಗಿ ಸನ್ಮಾರ್ಗ ಪಿ.ಯು. ಕಾಲೇಜಿನ ಉಪನ್ಯಾಸಕರು ಹಾಗೂ ನಿರ್ದೇಶಕರಾದ ಪ್ರೊ. ಪುನೀತ ದೇಶಪಾಂಡೆ ಆಗಮಿಸುವರು. ವಿಚಾರ ಸಂಕಿರಣದ ಅಧ್ಯಕ್ಷತೆಯನ್ನು ಸಂಸ್ಥೆಯ ಮಹಿಳಾ ಘಟಕದ ಅಧ್ಯಕ್ಷರಾದ ನಂದಾ ಚಂದ್ರು ಬಾಳಿಹಳ್ಳಿಮಠ ವಹಿಸುವರು. ಸಂಸ್ಥೆಯ ಮಹಿಳಾ ಘಟಕದ ಸದಸ್ಯರು ತಪ್ಪದೇ ಪಾಲ್ಗೊಂಡು ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕೆಂದು ಸಂಸ್ಥೆಯ ಮಹಿಳಾ ಘಟಕದ ಉಪಾಧ್ಯಕ್ಷರಾದ ದೀಪಾ ಎಸ್.ಗದಗ, ಸುಷ್ಮಾ ಎಸ್.ಜಾಲಿ, ಸುಜಾತಾ ಎಸ್.ಗುಡಿಮನಿ, ಸಹ ಗೌರವ ಕಾರ್ಯದರ್ಶಿಗಳಾದ ಲಲಿತಾ ಜಿ.ತಡಸದ, ಸುಧಾ ಸಿ. ಹುಣಸಿಕಟ್ಟಿ, ಕೋಶಾಧ್ಯಕ್ಷರಾದ ಪೂರ್ಣಿಮಾ ಕೆ.ಆಟದ ಇವರು ಕೋರಿರುವುದಾಗಿ ಸಂಸ್ಥೆಯ ಮಹಿಳಾ ಘಟಕದ ಗೌರವ ಕಾರ್ಯದರ್ಶಿ ಜ್ಯೋತಿ ರಾಮನಗೌಡ ದಾನಪ್ಪಗೌಡ್ರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---



ಲಕ್ಷ್ಮೇಶ್ವರದ ಕೆಎಸ್‌ಆರ್‌ಟಿಸಿ ಸಾರಿಗೆ ಘಟಕದಲ್ಲಿ ರಾಷ್ಟ್ರೀಯ ಏಕತಾ ದಿನದ ಅಂಗವಾಗಿ ಡಿಪೋ ಮ್ಯಾನೇಜರ್ ಸವಿತಾ ಆದಿ ಅವರ ನೇತೃತ್ವದಲ್ಲಿ ಸಿಬ್ಬಂದಿ, ನೌಕರರು ಏಕತಾ ಪ್ರತಿಜ್ಞಾ ಪ್ರಮಾಣ ಸ್ವೀಕರಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka